ಜನಮನದ ದನಿ


# ಪ್ರಜೋದಯ

ಸಂಪಾದಕ : ಜೆ.ಆರ್. ಕೆಂಚೇಗೌಡ



ಕೋಲ್ಕತ್ತಾದನಲ್ಲಿ ನ್ಯೂಜಿಲೆಂಡ್ ವಿರುದ್ಧ ನಡೆದ ಟಿ-20 ವಿಶ್ವಕಪ್‌ನ ಮೊದಲ ಸೆಮಿಫೈನಲ್ ಪಂದ್ಯದಲ್ಲಿ ಮಾರ್ಕೊ ಯಾನ್ಸನ್ ಅವರ ಅಜೇಯ ಅರ್ಧ ಶತಕದ (55 ರನ್) ನೆರವಿನಿಂದ ದಕ್ಷಿಣ ಆಫ್ರಿಕಾ 169 ರನ್ ಗಳಿಸಿದೆ.

05 ಮಾರ್ಚ್ 2026 ಗುರುವಾರ ಬೆಲೆ ₹ 2.00 ಸಂಪುಟ : 19 ಸಂಚಿಕೆ : 349 | ಪುಟ-4 | ಹಾಸನ | E-mail : prajodayahsn@gmail.com | RNI NO: KARKAN/2007/22629

ವಿವೇಕವೇ ಸಾಮಾಜಿಕ ವರ್ತನೆಯ ದಿಕ್ಸೂಚಿ » 2



5 ಲಕ್ಷ ಗಿಡ ಬೆಳೆಸಲು ಹಸಿರು ಹಾಸನ ಸಂಕಲ್ಪ » 3



ಗ್ಯಾರಂಟಿ ಯೋಜನೆಗಳಿಂದ ಜನರ ಬದುಕು ಸುಧಾರಣೆ » 4


# ಭಾರತಕ್ಕೆ ತೈಲ ಪೂರೈಕೆಗೆ ಸಿದ್ಧ : ರಷ್ಯಾ


• ಪ್ರಜೋದಯ ವರದಿ

**ನವದೆಹಲಿ :** ಇರಾನ್-ಇಸ್ರೇಲ್ ನಡುವೆ ನಡೆಯುತ್ತಿರುವ ಸಂಘರ್ಷದಿಂದ ಭಾರತಕ್ಕೆ ತೈಲ ಪೂರೈಕೆಯಲ್ಲಿ ವ್ಯತ್ಯಯವಾದರೆ ಅಥವಾ ಬೆಲೆ ಹೆಚ್ಚಳವಾದರೆ ಭಾರತಕ್ಕೆ ಇಂಧನ ಪೂರೈಸಲು ಸಿದ್ಧರಿದ್ದೇವೆಂದು ರಷ್ಯಾ ಹೇಳಿದೆ.

ಅಮೇರಿಕಾ ಮತ್ತು ಇರಾನ್ ನಡುವಿನ ಹಗೆತನ ತೀವ್ರಗೊಂಡಿದ್ದು, ವ್ಯಾಪಾರ, ಹಡಗು ಮಾರ್ಗಗಳು ಮತ್ತು ಇಂಧನ ಮಾರುಕಟ್ಟೆಗಳ ಮೇಲೆ ಪರಿಣಾಮ ಬೀರುತ್ತಿದೆ. ಈ ನಡುವೆ, ಭಾರತವು ಪಶ್ಚಿಮ ಏಷ್ಯಾದ ಬೆಳವಣಿಗೆಗಳನ್ನು ಸೂಕ್ಷ್ಮವಾಗಿ ಗಮನಿಸುತ್ತಿರುವಂತೆಯೇ ರಷ್ಯಾದಿಂದ ಹೇಳಿಕೆ ಬಂದಿದೆ.

ಇರಾನ್ ತನ್ನ ಪ್ರತೀಕಾರದ ದಾಳಿಯಲ್ಲಿ ತೈಲ ಸಂಸ್ಕರಣಾಗಾರಗಳು ಮತ್ತು ಉತ್ಪಾದನಾ ತಾಣಗಳು ಸೇರಿ ಗಲ್ಫ್ ದೇಶಗಳ ವಿವಿಧ ಪ್ರದೇಶಗಳನ್ನು ಗುರಿಯಾಗಿಸಿಕೊಂಡು ದಾಳಿ ನಡೆಸುತ್ತಿದೆ. ಇದರ ಜೊತೆಗೆ ಎಲ್ಲಾ ವಾಣಿಜ್ಯ ಚಟುವಟಿಕೆಗಳಿಗಾಗಿ ಬಳಸಲಾಗುತ್ತಿದ್ದ

## ಹಾರ್ಮುಜ್ ಜಲಸಂಧಿ ಮೇಲೆ ಇರಾನ್ ನಿಯಂತ್ರಣ



**ಯುದ್ಧದ ಪ್ರಮುಖ ಪರಿಣಾಮ**

- ದುಬೈ-ಅಬುಧಾಬಿ ಷೇರು ಮಾರುಕಟ್ಟೆ ಸೂಚ್ಯಂಕ ಭಾರೀ ಕುಸಿತ
- ಏಷ್ಯಾ ಮಾರುಕಟ್ಟೆ ಮೇಲೂ ಪರಿಣಾಮ
- ಸೋಲ್ ಷೇರುಪೇಟೆ ಶೇ.12ರಷ್ಟು ಕುಸಿತ

ಹಾರ್ಮುಜ್ ಜಲಸಂಧಿಯನ್ನು ಸಹ ಮುಚ್ಚಿದೆ. ಅದರ ಮೂಲಕ ಹಾದು ಹೋಗಲು ಯತ್ನಿಸುವ ಯಾವುದೇ ಹಡಗಿಗೆ ಬೆಂಕಿ ಹಚ್ಚಲಾಗುವುದೆಂದು ಇರಾನ್ ರೆವಲ್ಯೂಶನರಿ ಗಾರ್ಡ್ಸ್ (ಐಆರ್‌ಜಿಸಿ) ಎಚ್ಚರಿಸಿದೆ.

ಭಾರತವು ಸುಮಾರು 25 ದಿನಗಳಿಗೆ ಆಗುವಷ್ಟು ಕಚ್ಚಾ ತೈಲ ಮತ್ತು 25 ದಿನಗಳಿಗೆ ಆಗುವಷ್ಟು ಪೆಟ್ರೋಲ್ ಮತ್ತು ಡೀಸೆಲ್ ದಾಸ್ತಾನುಗಳನ್ನು ಹೊಂದಿದೆ. ದೇಶದ ಕಚ್ಚಾ ತೈಲ ಆಮದುಗಳಲ್ಲಿ ಕೇವಲ ಶೇ.40 ರಷ್ಟು ಮಾತ್ರ ಹಾರ್ಮುಜ್ ಜಲಸಂಧಿಯ ಮೂಲಕ ಆಮದಾಗುತ್ತದೆ. ಉಳಿದ ಶೇ.60ರಷ್ಟು ಇತರೆ ಮೂಲಗಳಿಂದ ಬರುತ್ತದೆ. ಭಾರತದ ತೈಲ ಕಂಪನಿಗಳು ಅಸ್ತಿತ್ವದಲ್ಲಿರುವ ಒಪ್ಪಂದಗಳ ಅಡಿಯಲ್ಲಿ ರಷ್ಯಾದ ಕಚ್ಚಾ ತೈಲವನ್ನು ಆಮದು ಮಾಡಿಕೊಳ್ಳುವುದನ್ನು ಮುಂದುವರಿಸಿವೆ ಎಂದು ಎಎನ್‌ಐ ವರದಿ ಮಾಡಿದೆ. ತೈಲ ದಾಸ್ತಾನು ಮತ್ತು ಪೂರೈಕೆ ಖಚಿತಪಡಿಸಿಕೊಳ್ಳಲು ಪೆಟ್ರೋಲಿಯಂ ಮತ್ತು ನೈಸರ್ಗಿಕ ಅನಿಲ ಸಚಿವಾಲಯವು ದಿನದ 24 ಗಂಟೆ

» ನಾಲ್ಕನೇ ಪುಟದಲ್ಲಿ

### ಜಿಲ್ಲೆಯವರಿಗೆ ಸಿಗದ ವಿಮಾನ ಟಿಕೆಟ್

• ಪ್ರಜೋದಯ ವರದಿ

**ಹಾಸನ:** ಉದ್ಯೋಗ ಹಾಗು ಪ್ರಶಸ್ತಿ ಸ್ವೀಕಾರ ಸಮಾರಂಭಕ್ಕಾಗಿ ತೆರಳಿದ್ದ ಜಿಲ್ಲೆಯ ಜನರು ಯುದ್ಧ ಪೀಡಿತ ಪ್ರದೇಶಗಳಲ್ಲಿ ಸಿಲುಕಿದ್ದು ತವರಿಗೆ ಮರಳಲು ಇನ್ನೂ ಸಾಧ್ಯವಾಗಿಲ್ಲ.

ದುಬೈ, ಬಹರೇನ್, ಅಬುದಾಬಿ ಸೇರಿ ವಿವಿಧೆಡೆ ರಾಜ್ಯದ 62 ಹಾಗು ಜಿಲ್ಲೆಯ 19 ಜನರು ಸಿಲುಕಿದ್ದಾರೆ. ಜಿಲ್ಲಾಡಳಿತ ಎಲ್ಲರೊಂದಿಗೆ ಸಂಪರ್ಕದಲ್ಲಿದ್ದು ಅವರನ್ನು ವಾಪಾಸ್ ಕರೆಸಿಕೊಳ್ಳಲು ಸರ್ವ ಪ್ರಯತ್ನ ನಡೆಸಿದೆ.

ಯುದ್ಧದ ಹಿನ್ನಲೆಯಲ್ಲಿ ಆರಂಭ ಎರಡು ದಿನ ವಿಮಾನಯಾನ ಸಂಪೂರ್ಣ ಸ್ಥಗಿತಗೊಂಡಿತ್ತು. ಬಳಿಕ ಸೀಮಿತ ವಿಮಾನಗಳ ಹಾರಾಟ ಪ್ರಾರಂಭವಾಗಿದೆಯಾದರೂ ಮೊದಲು ಟಿಕೆಟ್ ಬುಕ್ ಮಾಡಿದವರಿಗೆ ಪ್ರಯಾಣದ ಅವಕಾಶ ಕಲ್ಪಿಸಲಾಗುತ್ತಿದೆ. ಜಿಲ್ಲೆಯ ಕೆಲವರು ಮೂರು ಬಾರಿ ಟಿಕೆಟ್ ಬುಕ್ ಮಾಡಿದರೂ ವಿಮಾನ ಸಿಗದೆ ಪರದಾಡುತ್ತಿದ್ದಾರೆ ಎನ್ನಲಾಗಿದೆ.

ವೃದ್ಧರು ಹಾಗು ಮಕ್ಕಳು ಇದ್ದಾರೆ. ಆದಷ್ಟು ಬೇಗ ನಮ್ಮನ್ನು ವಾಪಾಸ್ ಕರೆಸಿಕೊಳ್ಳಿ ಎಂದು ದುಬೈನಲ್ಲಿರುವ ಅರಸೀಕೆರೆಯ ಜಯದೇವ್ ಅವರು ಕೋರಿದ್ದಾರೆ. ಮುಖ್ಯಮಂತ್ರಿ ಸಿದ್ದರಾಮಯ್ಯ, ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಹಾಗು ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ.ವಿಜಯೇಂದ್ರ ದೂರವಾಣಿ ಮೂಲಕ ಮಾತನಾಡಿದ್ದಾರೆ. ಆದರೆ ವಾಪಾಸ್ ಬರಲು ಯಾವುದೇ ವ್ಯವಸ್ಥೆ ಆಗಿಲ್ಲವೆಂದು ಅವರು ಅಸಮಾಧಾನ ವ್ಯಕ್ತಪಡಿಸಿದ್ದಾರೆ.

# ನನ್ನಿಂದ ತಪ್ಪುಗಳಾಗಿದ್ದರೆ ತಿದ್ದಿಕೊಳ್ಳಲು ಸಿದ್ಧ

## ಪಕ್ಷದ ಮುಖಂಡರ ಸಮಸ್ಯೆ ಆಲಿಸಿ ಸಚಿವರು, ಅಧ್ಯಕ್ಷರ ಗಮನಕ್ಕೂ ತರುವೆ

• ಪ್ರಜೋದಯ ವರದಿ

**ಹಾಸನ:** ಪಕ್ಷದ ಎಲ್ಲಾ ನಾಯಕರು, ಕಾರ್ಯಕರ್ತರು ಸೇರಿ ನನ್ನನ್ನ ಸಂಸದನಾಗಿ ಆಯ್ಕೆ ಮಾಡಿದ್ದಾರೆ. ನನ್ನಿಂದ ತಪ್ಪುಗಳಾಗಿದ್ದರೆ ತಿದ್ದಿಕೊಳ್ಳಲು ಸಿದ್ಧನಿದ್ದೇನೆಂದು ಸಂಸದ ಶ್ರೇಯಸ್ ಅವರು ತಿಳಿಸಿದರು.

ಬುಧವಾರ ಸಂಸದ ಕಚೇರಿಯಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಎಲ್ಲಾ ಪಕ್ಷಗಳಲ್ಲೂ ಇರುವಂತೆ ನಮ್ಮ ಪಕ್ಷದಲ್ಲೂ ಸಣ್ಣಪುಟ್ಟ ಅಸಮಾಧಾನವಿದೆ. ಆ ಬಗ್ಗೆ ನಾನೇ ಸಂಬಂಧಪಟ್ಟವರೊಂದಿಗೆ ಮುಂದಿನ ದಿನಗಳಲ್ಲಿ ಸಭೆ ನಡೆಸಿ ಚರ್ಚಿಸಿ ಸರಿಪಡಿಸಲಾಗುವುದೆಂದು ಹೇಳಿದರು.

ಪಕ್ಷದ ಎಲ್ಲಾ ಮುಖಂಡರನ್ನು ಆಹ್ವಾನಿಸಿ ಸಭೆ ನಡೆಸಿ, ನನ್ನಿಂದ ಏನು ತಪ್ಪಾಗಿದೆ, ಸರ್ಕಾರದಿಂದ ಏನಾಗಬೇಕೆಂದು ಕೇಳಿಕೊಳ್ಳುತ್ತೇನೆ. ಅಲ್ಲಿ ಪ್ರಸ್ತಾಪವಾಗುವ ವಿಷಯಗಳನ್ನು ಜಿಲ್ಲಾ ಉಸ್ತುವಾರಿ ಸಚಿವರು ಹಾಗು ಕೆಪಿಸಿಸಿ ಅಧ್ಯಕ್ಷರ ಗಮನಕ್ಕೆ ತರಲಾಗುವುದು. ಈಗಾಗಲೇ ಹೆಚ್.ಕೆ.



ಮಹೇಶ್ ಅವರೊಂದಿಗೆ ಮಾತನಾಡಿದ್ದೇನೆ, ಅವರೊಂದಿಗೆ ಯಾವುದೇ ದ್ವೇಷವಿಲ್ಲ. ಔತಣಕೂಟಕ್ಕೆ ಸೇರಿದ ಸಂದರ್ಭದಲ್ಲಿ ಚರ್ಚೆ ಮಾಡಿದ್ದಾರೆ. ಅದಕ್ಕೆಲ್ಲಾ ವಿಶೇಷ ಅರ್ಥ ಕಲ್ಪಿಸಬೇಕಾಗಿಲ್ಲ ಎಂದರು.

ಗ್ಯಾರಂಟಿ ಯೋಜನೆಗಳ ಜೊತೆಗೆ ಪಕ್ಷದ ಕಾರ್ಯಕರ್ತರ ಪರಿಶ್ರಮದಿಂದಲೇ ಕಾಂಗ್ರೆಸ್ ಸರ್ಕಾರ ಅಧಿಕಾರಕ್ಕೆ ಬಂದಿದೆ. ನಾನು ಕೂಡ ಸಂಸದನಾಗಿದ್ದೇನೆ. ಮುಂಬರುವ ಜಿಲ್ಲಾ ಪಂಚಾಯಿತಿ ಚುನಾವಣೆಯಲ್ಲಿ ಜಿಲ್ಲೆಯಲ್ಲಿ 20ಕ್ಕೂ ಹೆಚ್ಚು ಸ್ಥಾನಗಳನ್ನು ಗೆಲ್ಲುತ್ತೇವೆ, ಅಧಿಕಾರವನ್ನೂ ಹಿಡಿಯುತ್ತೇವೆ. ಮುಂದಿನ ವಿಧಾನಸಭೆ ಚುನಾವಣೆಯಲ್ಲಿ 150ಕ್ಕೂ ಹೆಚ್ಚು ಸ್ಥಾನಗಳನ್ನು ಗೆಲ್ಲುತ್ತೇವೆಂದು ವಿಶ್ವಾಸ ವ್ಯಕ್ತಪಡಿಸಿದರು.

### ಬಜೆಟ್‌ನಲ್ಲಿ ಹೆಚ್ಚಿನ ಅನುದಾನ ನಿರೀಕ್ಷೆ

ಈ ಬಾರಿಯ ರಾಜ್ಯ ಬಜೆಟ್‌ನಲ್ಲಿ ವಿಮಾನ ನಿಲ್ದಾಣ, ಆನೆ-ಮಾನವ ಸಂಘರ್ಷ ನಿಯಂತ್ರಣಕ್ಕೆ ಸೂಕ್ತ ಅನುದಾನ ನೀಡುವಂತೆ ಸರ್ಕಾರಕ್ಕೆ ಮನವಿ ಮಾಡಲಾಗಿದೆ. ವಿಮಾನ ನಿಲ್ದಾಣ ಅಭಿವೃದ್ಧಿಗೆ 80 ಕೋ.ರೂ. ಅನುದಾನ ದೊರೆಯುವ ನಿರೀಕ್ಷೆ ಇದ್ದು, ಜಿಲ್ಲಾ ಉಸ್ತುವಾರಿ ಸಚಿವರು ಸಹ ಈ ಯೋಜನೆಗೆ ಆಸಕ್ತಿ ತೋರಿದ್ದಾರೆಂದು ಹೇಳಿದರು.

ಜಿಲ್ಲಾಧಿಕಾರಿ ಕಚೇರಿ, ಸೂಪರ್ ಸ್ಪೆಷಾಲಿಟಿ ಆಸ್ಪತ್ರೆ ಅಭಿವೃದ್ಧಿಗೆ ಅನುದಾನ ಹಾಗು ಗೊರೂರು ಸಮೀಪ ಉದ್ಯಾನವನ ನಿರ್ಮಾಣಕ್ಕೂ ಕ್ರಮ ಕೈಗೊಳ್ಳಲಾಗುತ್ತಿದೆ ಎಂದು ತಿಳಿಸಿದರು.

# ಆಡಳಿತದಲ್ಲಿ ಕಟ್ಟುನಿಟ್ಟಿನ ಕ್ರಮ : ಸಹಿಸದೆ ಕಿರುಕುಳ

## ಮಲೆನಾಡು ತಾಂತ್ರಿಕ ಶಿಕ್ಷಣ ಸಂಸ್ಥೆ ಅಧ್ಯಕ್ಷ ಆರ್.ಟಿ.ದ್ಯಾವೇಗೌಡ ಆರೋಪ

• ಪ್ರಜೋದಯ ವರದಿ

**ಹಾಸನ:** ಮಲೆನಾಡು ತಾಂತ್ರಿಕ ಶಿಕ್ಷಣ ಸಂಸ್ಥೆ ಆಡಳಿತ ಮಂಡಳಿ ಅಧಿಕಾರ ಹಂಚಿಕೆ ಬಗ್ಗೆ ಬಿ.ಆರ್.ಗುರುದೇವ್ ಮತ್ತು ನಮ್ಮ ನಡುವೆ ಒಪ್ಪಂದವಾಗಿತ್ತು. ಆದರೆ, ಅವರು ಹೇಳಿದ ಹಾಗೆ ನಾವು ನಡೆದುಕೊಳ್ಳಲಿಲ್ಲ, ಆಡಳಿತದಲ್ಲಿ ಕಟ್ಟುನಿಟ್ಟಿನ ಕ್ರಮ ಜಾರಿಗೊಳಿಸಿದ್ದಕ್ಕೆ ಕಿರುಕುಳ ನೀಡುತ್ತಿದ್ದಾರೆಂದು ಸಂಸ್ಥೆ ಅಧ್ಯಕ್ಷ ಆರ್.ಟಿ.ದ್ಯಾವೇಗೌಡ ಅವರು ಆರೋಪಿಸಿದರು.

ಬುಧವಾರ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ನಾನು 3 ವರ್ಷ, ಬಿ.ಆರ್.ಗುರುದೇವ್ ಅವರಿಗೆ 2 ವರ್ಷ ಅಧ್ಯಕ್ಷ ಸ್ಥಾನದ ಹಂಚಿಕೆ ಮಾಡಿಕೊಳ್ಳಲು ನಮ್ಮ ನಡುವೆ ಲಿಖಿತ ರೂಪದಲ್ಲಿ ಒಪ್ಪಂದವಾಗಿತ್ತು. ಈಗ ಇಷ್ಟೆಲ್ಲಾ ಗೊಂದಲಕ್ಕೆ ಬಿ.ಆರ್. ಗುರುದೇವ್ ಅವರೇ ಕಾರಣವೆಂದು ದೂರಿದರು.

ಈ ಹಿಂದಿನ ಅವಧಿಯಲ್ಲಿ ನಡೆದಿದ್ದ ಅಕ್ರಮಗಳನ್ನು ನಮ್ಮ ಅವಧಿಯಲ್ಲಿ ಪರಿಶೀಲನೆಗೆ ಮುಂದಾಗಿದ್ದು, 10 ಸಾವಿರ ರೂ. ಇದ್ದ ಸದಸ್ಯತ್ವ ಶುಲ್ಕವನ್ನು ಏಕಾಏಕಿ 1 ಲ.ರೂ.ಗೆ ಹೆಚ್ಚಿಸಿದರು. ಸಂಸ್ಥೆ ನಿರ್ದೇಶಕರೇ ಗುತ್ತಿಗೆದಾರರಾಗುವುದನ್ನು ತಡೆದಿದ್ದಕ್ಕೆ





ಹಾಗು ಸಂಸ್ಥೆ ವ್ಯಾಪ್ತಿಯ ಎಲ್ಲಾ ವಾಣಿಜ್ಯ ಮಳಿಗೆಗಳಿಗೆ ಒಂದೇ ರೀತಿಯ ಬಾಡಿಗೆ ಜಾರಿಗೊಳಿಸಿದ್ದರಿಂದ ಅವರಿಗೆ ಅಕ್ರಮ ನಡೆಸಲು ಅವಕಾಶ ಸಿಗಲಿಲ್ಲವೆಂಬ ಕಾರಣಕ್ಕೆ ನಮಗೆ ಆಡಳಿತ ನಡೆಸಲು ಬಿಡುತ್ತಿಲ್ಲ. ಇವರು ನೀಡುತ್ತಿರುವ ಕಿರುಕುಳದಿಂದ ನನ್ನ ಆಯಸ್ಸು ಕಡಿಮೆಯಾಗಿದೆ ಎಂದು ಹೇಳಿದರು.

**87.25 ಕೋ.ರೂ. ಠೇವಣಿ**

ಸಂಸ್ಥೆ ಕಾರ್ಯದರ್ಶಿ ಜಗದೀಶ್ ಚೌಡುವಳ್ಳಿ ಅವರು ಮಾತನಾಡಿ, ನಾವು ಅಧಿಕಾರ ವಹಿಸಿಕೊಂಡಾಗ 68 ವರ್ಷ ಆಡಳಿತ ನಡೆಸಿ ಕಾಲೇಜು ಖಾತೆಯಲ್ಲಿ ಅವರು ಇಟ್ಟಿದ್ದು 52.10 ಕೋ. ರೂ., ನಾವು ಒಂದೇ ವರ್ಷದಲ್ಲಿ ಅದನ್ನು 87.25 ಕೋ. ರೂ.ಗೆ ಹೆಚ್ಚಿಸಿದ್ದೇವೆ. ಆದರೂ ನಮ್ಮ ವಿರುದ್ಧ ಭ್ರಷ್ಟಾಚಾರದ ಆರೋಪ ಮಾಡುತ್ತಿದ್ದಾರೆ. ನಾವು ಅಧಿಕಾರ ವಹಿಸಿಕೊಂಡ ಬಳಿಕ ತೆಗೆದುಕೊಂಡ ಕಟ್ಟುನಿಟ್ಟಿನ ಕ್ರಮದಿಂದ ಹಣ ಮಾಡಲು ಬಿಡುತ್ತಿಲ್ಲವೆಂಬ ಅಸಮಾಧಾನದೊಂದಿಗೆ ನಮ್ಮ ವಿರುದ್ಧ ಇಲ್ಲಸಲ್ಲದ ಆರೋಪಗಳನ್ನು ಮಾಡಿ ನಮ್ಮ ಎದುರಾಳಿ ಬಣದೊಟ್ಟಿಗೆ ಸೇರಿ ನಮಗೆ ಆಡಳಿತ ನಡೆಸಲು ತೊಂದರೆ ನೀಡುತ್ತಿದ್ದಾರೆಂದು ದೂರಿದರು.

ಸಂಸ್ಥೆಯಲ್ಲಿ ಮಧ್ಯವರ್ತಿಗಳ ಹಾವಳಿ ಹೆಚ್ಚಾಗಿದೆ. ಬಿ.ಆರ್. ಗುರುದೇವ್ ಅವರ ಪುತ್ರ ಅರ್ಜುನ್ ಗುರುದೇವ್ ಮತ್ತು ಗುರಪ್ಪ ಅವರು ಪ್ರಮುಖವಾಗಿ ನಮ್ಮ ಆಡಳಿತಕ್ಕೆ ಅಡ್ಡಿ ಉಂಟು ಮಾಡುತ್ತಿದ್ದಾರೆ. ಅಧಿಕಾರ ಹಂಚಿಕೆ ಒಪ್ಪಂದದಂತೆ ಅರ್ಜುನ್ ಗುರುದೇವ್ ಅವರನ್ನು ಸಂಸ್ಥೆಯ ಉಪಾಧ್ಯಕ್ಷರನ್ನಾಗಿ ಮಾಡಲಾಗಿತ್ತು. ಸ್ಮಾರ್ಟ್ ಕ್ಯಾಂಪಸ್ ಯೋಜನೆಗೆ 39 ಲ. ರೂ. ದರಪಟ್ಟಿಯನ್ನು ತಮ್ಮ

» ಎರಡನೇ ಪುಟದಲ್ಲಿ

# ದೇವಸ್ಥಾನ ಆಸ್ತಿ ಸಂರಕ್ಷಣೆಗೆ ಕಟ್ಟುನಿಟ್ಟಿನ ಸೂಚನೆ

## ಮುಜರಾಯಿ ಇಲಾಖೆ ಅಪರ ಮುಖ್ಯ ಕಾರ್ಯದರ್ಶಿ ಸಲಹೆ । ಪ್ರಗತಿ ಪರಿಶೀಲನಾ ಸಭೆ

• ಪ್ರಜೋದಯ ವರದಿ

**ಹಾಸನ:** ಜಿಲ್ಲೆಯ ಎಲ್ಲಾ ದೇವಸ್ಥಾನಗಳ ಆಸ್ತಿ ಸಂರಕ್ಷಣೆ ವಿಚಾರದಲ್ಲಿ ನಿರ್ಲಕ್ಷ್ಯ ತೋರದೆ ಕ್ರಮ ಕೈಗೊಳ್ಳಬೇಕೆಂದು ಕಂದಾಯ ಇಲಾಖೆ, ಮುಜರಾಯಿ ಇಲಾಖೆ ಅಪರ ಮುಖ್ಯ ಕಾರ್ಯ ದರ್ಶಿ ರಾಜೇಂದ್ರ ಕುಮಾರ್ ಕಟಾರಿಯಾ ಅವರು ಸೂಚನೆ ನೀಡಿದರು.

ಬುಧವಾರ ಜಿಲ್ಲಾಧಿಕಾರಿ ಕಚೇರಿ ಸಭಾಂಗಣದಲ್ಲಿ ಮುಜರಾಯಿ ಇಲಾಖೆ ಹಾಗು ಕಂದಾಯ ಇಲಾಖೆಯ ಪ್ರಗತಿ ಪರಿಶೀಲನಾ ಸಭೆಯಲ್ಲಿ ಮಾತನಾಡಿದ ಅವರು, ಜಿಲ್ಲೆಯ 2456 ದೇವಸ್ಥಾನಗಳ ಹೆಸರಿನಲ್ಲಿ ಅಧಿಸೂಚನೆ ಹೊರಡಿಸಬೇಕು. ಮುಜರಾಯಿ ಇಲಾಖೆಗೆ ಸೇರಿದ ದೇವಸ್ಥಾನ ಆಸ್ತಿ ರಕ್ಷಣೆಯನ್ನು ಆದ್ಯತೆಯಾಗಿ ಪರಿಗಣಿಸಬೇಕು. ಅಧಿಸೂಚನೆ ಹೊರಡಿಸಲು ಪ್ರಸ್ತಾವನೆ ಸಲ್ಲಿಸುವ ಸಂದರ್ಭದಲ್ಲಿ ಕಡ್ಡಾಯವಾಗಿ ದೇವಸ್ಥಾನದ ಹೆಸರು ಹಾಗು ವಿಳಾಸ ಪರಿಶೀಲಿಸಿ ಸಲ್ಲಿಸಬೇಕು. ಅಧಿಸೂಚನೆ ಬಳಿಕವು ಪರಿಶೀಲಿಸಿಕೊಳ್ಳಬೇಕು. ಮುಜರಾಯಿ ಇಲಾಖೆಗೆ ಒಳಪಡುವ





ಎಲ್ಲಾ ದೇವಸ್ಥಾನ ಆಸ್ತಿಗಳಿಗೆ ಇ-ಖಾತೆ ಹಾಗು ಜಮೀನು ಇದ್ದರೆ ಪಹಣಿ, ದೇವಸ್ಥಾನದ ಆಸ್ತಿ ಒತ್ತುವರಿ ಆಗದಂತೆ ಎಚ್ಚರ ವಹಿಸಬೇಕೆಂದರು.

ಎಲ್ಲಾ ದೇವಸ್ಥಾನ ಹಾಗು ಆಸ್ತಿಗಳು ಸರ್ವೆ ಆಗಿರಬೇಕು. ಸಮೀಕ್ಷೆಯಾದ ನಂತರ ಒತ್ತುವರಿಯಾಗಿದ್ದರೆ ತೆರವುಗೊಳಿಸಿ ತಂತಿ ಬೇಲಿ ಅಥವಾ ಕಾಂಪೌಂಡ್ ನಿರ್ಮಿಸುವಂತೆ ಸೂಚಿಸಿದ ಅವರು, ಮುಜರಾಯಿ ಇಲಾಖೆಗೆ ಒಳಪಡುವ ಎಲ್ಲಾ ದೇವಸ್ಥಾನಗಳಿಗೆ ಕಡ್ಡಾಯವಾಗಿ ದೇವಸ್ಥಾನ ಹೆಸರು, ವಿಳಾಸ ಯಾವ ದರ್ಜೆಯ ದೇವಸ್ಥಾನ ಎಂಬುದರ ನಾಮ ಫಲಕವನ್ನು ಅಳವಡಿಸಬೇಕೆಂದು ನಿರ್ದೇಶನ ನೀಡಿದರು.

ಮುಜರಾಯಿ ಇಲಾಖೆ ಆಯುಕ್ತ ಶರತ್ ಅವರು ಮಾತನಾಡಿ, ಜಿಲ್ಲೆಯಲ್ಲಿ 6 ಎ ದರ್ಜೆಯ ದೇವಸ್ಥಾನ, 6 ಬಿ ದರ್ಜೆಯ ದೇವಸ್ಥಾನ ಹಾಗು 2,444 ಸಿ ದರ್ಜೆಯ ದೇವಸ್ಥಾನಗಳಿವೆ. 1,796 ದೇವಸ್ಥಾನಗಳು ಅಧಿಸೂಚನೆ ಹೊರಡಿಸಲು ಪ್ರಸ್ತಾವನೆ ಸಲ್ಲಿಸಲಾಗಿದ್ದು, ಕೂಡಲೇ ಅಧಿಸೂಚನೆಗೆ ಕ್ರಮ ವಹಿಸಲಾಗುವುದು. 1562 ಮುಜರಾಯಿ ದೇವಸ್ಥಾನ ಹಾಗು ಆಸ್ತಿಗಳಲ್ಲಿ 691 ಪಹಣಿ, 808 ಗ್ರಾಮ ಠಾಣಾ ವ್ಯಾಪ್ತಿ, 63 ನಗರ ಸ್ಥಳೀಯ ಸಂಸ್ಥೆಗಳ ವ್ಯಾಪ್ತಿಗೆ ಬರುತ್ತದೆಂದು ತಿಳಿಸಿದರು. ಅಪರ ಜಿಲ್ಲಾಧಿಕಾರಿ ಜಗದೀಶ್ ಗಂಗಣ್ಣನವರ್, ಭೂದಾಖಲೆಗಳ ಇಲಾಖೆ ಉಪನಿರ್ದೇಶಕಿ ಹೇಮಲತಾ, ತಹಶೀಲ್ದಾರ್‌ಗಳಿದ್ದರು.

### ಡಿಜಿಟಲೀಕರಣಕ್ಕೆ ಕ್ರಮ ವಹಿಸಲು ಸೂಚನೆ

**ಹಾಸನ :** ಎಲ್ಲಾ ತಾಲ್ಲೂಕುಗಳಲ್ಲಿ ಭೂ ಸುರಕ್ಷಾ ಯೋಜನೆಯಡಿ ದಾಖಲೆಗಳ ಡಿಜಿಟಲೀಕರಣವನ್ನು ಕೂಡಲೇ ಪೂರ್ಣಗೊಳಿಸಬೇಕೆಂದು ಕಂದಾಯ ಇಲಾಖೆ ಹಾಗು ಮುಜರಾಯಿ ಇಲಾಖೆ ಅಪರ ಮುಖ್ಯ ಕಾರ್ಯದರ್ಶಿ ರಾಜೇಂದ್ರ ಕುಮಾರ್ ಕಟಾರಿಯಾ ಅವರು ಹೇಳಿದರು.

ದಾಖಲೆಗಳನ್ನು ಡಿಜಿಟಲೀಕರಣ ಮಾಡುವ ವೇಳೆಯಲ್ಲಿ ಎ, ಬಿ, ಸಿ, ಡಿ ಯಾಗಿ ದಾಖಲೆಗಳನ್ನು ವರ್ಗೀಕರಿಸಿ ಸ್ಕ್ಯಾನ್ ಮಾಡಬೇಕು, ಹೆಚ್ಚುವರಿ ಸಿಬ್ಬಂದಿ ನೇಮಿಸಿಕೊಂಡು ಡಿಜಿಟಲೀಕರಣ ಮಾಡಬೇಕು. ಪೌತಿ ಖಾತೆ ಆಂದೋಲನದ ಸಮರ್ಪಕವಾಗಿ ಅನುಷ್ಠಾನವಾದರೆ ಜನರಿಗೆ ಅನುಕೂಲವಾಗುತ್ತದೆ. ಜಿಲ್ಲೆಯಲ್ಲಿ ಬಾಕಿ ಇರುವ ಕಂದಾಯ ಗ್ರಾಮ ಗುರುತಿಸಿ ಕೂಡಲೇ ಪ್ರಸ್ತಾವನೆಯನ್ನು ಸಲ್ಲಿಸುವಂತೆ ತಿಳಿಸಿದರು.

ಸರ್ಕಾರಿ ಜಮೀನು ಹಾಗು ಕೆರೆ ಒತ್ತುವರಿ ತೆರವಿಗೆ ಕ್ರಮ ವಹಿಸಬೇಕು, ತಾಲ್ಲೂಕುಗಳಿಗೆ ಅನುಮೋದನೆಯಾಗಿರುವ ಗ್ರಾಮ ಆಡಳಿತಾಧಿಕಾರಿಗಳ ಹುದ್ದೆ ಹಾಗು ತಹಶೀಲ್ದಾರ್ ಕಚೇರಿಗೆ ಅನುಮೋದನೆಯಾಗಿರುವ ಹುದ್ದೆಗಳ ವಿವರ, ಖಾಲಿ ಇರುವ ಹುದ್ದೆಗಳ ವಿವರ ವರದಿಯನ್ನು ಸಲ್ಲಿಸುವಂತೆ ತಿಳಿಸಿದರು.

ಜಿಲ್ಲಾಧಿಕಾರಿ ಕೆ.ಎಸ್.ಲತಾ ಕುಮಾರಿ ಅವರು ಮಾತನಾಡಿ, ಮಾರ್ಚ್ ಅಂತ್ಯದೊಳಗೆ ಅರಕಲಗೂಡು, ಸಕಲೇಶಪುರ, ಆಲೂರು, ಅರಸೀಕೆರೆ ಹಾಗು ಹಾಸನ ಜಿಲ್ಲಾಧಿಕಾರಿ ಕಚೇರಿಯ ದಾಖಲೆಗಳನ್ನು ಪೂರ್ಣಗೊಳಿಸಲಾಗುವುದೆಂದರು.

ಜಿಲ್ಲೆಯಲ್ಲಿ 2308 ದೇವಸ್ಥಾನ ಹಾಗು ಆಸ್ತಿಗಳಿಗೆ ಖಾತೆ ಇದೆ. 546 ಆಸ್ತಿಗಳ ಖಾತೆ ನಿರ್ವಹಣೆ ಬಾಕಿ ಇದೆ. 1562 ಮುಜರಾಯಿ ದೇವಸ್ಥಾನ ಅಥವಾ ಆಸ್ತಿಗಳಿಗೆ ಧಾರ್ಮಿಕ ದತ್ತಿ ಇಲಾಖೆ ಎಂದು ನವೀಕರಿಸಲಾಗಿದೆ ಎಂದರು.

# ಟೋಲ್‌ನಲ್ಲಿ ಕಂಟೇನರ್ ಚಾಲಕ ದುಂಡಾವರ್ತನೆ

• ಪ್ರಜೋದಯ ವರದಿ

**ಆಲೂರು:** ಮದ್ಯದ ಅಮಲಿನಲ್ಲಿದ್ದ ಕಂಟೇನರ್ ಚಾಲಕ ಟೋಲ್‌ನಲ್ಲಿ ಬೈಕ್‌ಗೆ ಡಿಕ್ಕಿ ಹೊಡೆದು ವಾಹನ ನಿಲ್ಲಿಸದೆ ಪರಾರಿಯಾಗಲು ಯತ್ನಿಸಿದ ವೇಳೆ ಟೋಲ್ ಸಿಬ್ಬಂದಿ ಹಿಂಬಾಲಿಸಿ ಹಿಡಿದು ಪೊಲೀಸರಿಗೆ ಒಪ್ಪಿಸಿರುವ ಘಟನೆ ತಾಲ್ಲೂಕಿನ ಚೌಲಗೆರೆ ಸಮೀಪದ ಟೋಲ್ ಬಳಿ ಬುಧವಾರ ನಡೆದಿದೆ.

ಹಾಸನದಿಂದ ಮಂಗಳೂರಿಗೆ ತೆರಳುತ್ತಿದ್ದ ಕಂಟೇನರ್ ಚಾಲಕ ಕಂಠಪೂರ್ತಿ ಮದ್ಯ ಸೇವಿಸಿ ವೇಗವಾಗಿ ಚಾಲನೆ ಮಾಡಿಕೊಂಡು ಬಂದು ಟೋಲ್‌ಗೇಟ್ ಬಳಿ ನಿಂತಿದ್ದ ಬೈಕ್‌ಗೆ ಡಿಕ್ಕಿ ಹೊಡೆದು ಕಂಟೈನರ್ ನಿಲ್ಲಿಸದೇ, ಟೋಲ್ ಗೇಟ್‌ನ್ನು ಮುರಿದುಕೊಂಡು ಪರಾರಿಯಾಗಲು ಯತ್ನಿಸಿದ್ದಾನೆ.



ಇದನ್ನು ಗಮನಿಸಿದ ಟೋಲ್ ಸಿಬ್ಬಂದಿ ಸುಮಾರು ಎರಡು ಕಿಲೋ ಮೀಟರ್ ಹಿಂಬಾಲಿಸಿದ ನಂತರ ಸಿಂಗಾಪುರ ದೇವಸ್ಥಾನ ಸಮೀಪ ವಾಹನವನ್ನು ಅಡ್ಡಗಟ್ಟಿ ನಿಲ್ಲಿಸಿದ್ದಾರೆ. ಕಂಟೇನರ್‌ನಲ್ಲಿದ್ದ ಇಬ್ಬರನ್ನು ಹಿಡಿದು ಟೋಲ್ ಸಿಬ್ಬಂದಿ ಪೊಲೀಸರಿಗೆ ಒಪ್ಪಿಸಿದ್ದಾರೆ. ಪಟ್ಟಣ ಠಾಣೆಯಲ್ಲಿ ಪ್ರಕರಣ ದಾಖಲಿಸಿಕೊಂಡಿದ್ದಾರೆ.

# ರಾಗಿ ಖರೀದಿ ಕೇಂದ್ರಕ್ಕೆ ಶಿವಲಿಂಗೇಗೌಡ ಭೇಟಿ

• ಪ್ರಜೋದಯ ವರದಿ

**ಬಾಣಾವರ:** ಪಟ್ಟಣದ ಕೃಷಿ ಉತ್ಪನ್ನ ಮಾರುಕಟ್ಟೆಯ ರಾಗಿ ಖರೀದಿ ಕೇಂದ್ರಕ್ಕೆ ಶಾಸಕ ಕೆ.ಎಂ. ಶಿವಲಿಂಗೇಗೌಡ ಅವರು ಭೇಟಿ ನೀಡಿ ರೈತರ ಸಮಸ್ಯೆಗಳನ್ನು ಆಲಿಸಿದರು.

ಈ ಸಂದರ್ಭದಲ್ಲಿ ಅಧಿಕಾರಿಗಳನ್ನು ಕರೆದು, ರೈತರಿಗೆ ತೊಂದರೆಯಾಗದಂತೆ ಪಾರದರ್ಶಕವಾಗಿ ಮತ್ತು ಸಮರ್ಪಕವಾಗಿ ರಾಗಿಯನ್ನು ಖರೀದಿಸಬೇಕು. ರಾಗಿ ಖರೀದಿಯಲ್ಲಿ ದಲ್ಲಾಳಿಗಳು, ವರ್ತಕರ ಕಾಟದಿಂದ ರೈತರಿಗೆ ಅನ್ಯಾಯವಾಗದಂತೆ ಕಟ್ಟುನಿಟ್ಟಿನ ನಿಗಾ ವಹಿಸುವಂತೆ ಅಧಿಕಾರಿಗಳಿಗೆ ನಿರ್ದೇಶನ ನೀಡಿದರು.

ರಾಗಿ ಖರೀದಿಗೆ ಮುನ್ನ ಜರಡಿ ಮಾಡಿ ಗುಣಮಟ್ಟದ ರಾಗಿಯನ್ನಷ್ಟೇ ಖರೀದಿಸಬೇಕು.



ಇದರಲ್ಲಿ ವ್ಯತ್ಯಾಸ ಕಂಡು ಬಂದಲ್ಲಿ ಖರೀದಿ ಕೇಂದ್ರದ ಅಧಿಕಾರಿಗಳೇ ಹೊಣೆಗಾರರಾಗುತ್ತಾರೆಂದು ಎಚ್ಚರಿಸಿದ ಅವರು, ಒಂದು ಕ್ವಿಂಟಾಲ್‌ಗೆ ಚೀಲದ ಹೆಸರಿನಲ್ಲಿ ಹೆಚ್ಚುವರಿ ರಾಗಿಯನ್ನು ಪಡೆಯಬಾರದು. ಕ್ವಿಂಟಾಲ್‌ಗೆ ಕೇವಲ ಒಂದು ಕಿಲೋ ಮಾತ್ರ ಹೆಚ್ಚುವರಿಯಾಗಿ ಪಡೆದು ರೈತರಿಗೆ ಅನುಕೂಲ ಮಾಡಿಕೊಡಬೇಕು. ಲೋಡರ್‌ಗಳು ಮತ್ತು ಹಮಾಲಿಗಳಿಂದಲೂ ರೈತರಿಗೆ ತೊಂದರೆ ಉಂಟಾಗದಂತೆ ಅಧಿಕಾರಿಗಳು ಖುದ್ದಾಗಿ ಗಮನಹರಿಸಬೇಕೆಂದು ಸೂಚಿಸಿದರು.

ರಾಗಿ ಖರೀದಿ ಕೇಂದ್ರದ ಟೆಂಡರ್ ಪಡೆದಿರುವ ಗುತ್ತಿಗೆದಾರರೊಂದಿಗೆ ಮಾತನಾಡಿ, ಬಾಣಾವರ ರಾಗಿ ಕೇಂದ್ರಕ್ಕೆ ಪ್ರತಿದಿನ ಎರಡುರಿಂದ ಮೂರು ಲಾರಿಗಳ ವ್ಯವಸ್ಥೆ ಮಾಡಬೇಕು ಎಂದು ಮನವಿ ಮಾಡಿದರು. ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಬಿ.ಸಿ. ಶ್ರೀನಿವಾಸ್, ಬಗರ್ ಹುಕುಂ ಸಮಿತಿಯ ಸದಸ್ಯ ಬಿ.ಎಂ.ಜಯಣ್ಣ, ಗ್ರಾಮ ಪಂಚಾಯಿತಿ ಮಾಜಿ ಅಧ್ಯಕ್ಷೆ ವೀಣಾ ಸುರೇಶ್, ಸದಸ್ಯರಾದ ಡಿ.ಆರ್. ರಾಜು, ಬಿ.ಆರ್. ಸುರೇಶ್, ಕಾಚಿಘಟ್ಟ ಗ್ರಾಮ ಪಂಚಾಯಿತಿ ಸದಸ್ಯ ಮಹೇಶ್, ಪ್ರಾಥಮಿಕ ಸಹಕಾರ ಸಂಘದ ಸದಸ್ಯ ರಮೇಶ್, ಕಾಂಗ್ರೆಸ್ ಮುಖಂಡರು ಇದ್ದರು.

# ಪಾಠ ಮಾಡುತ್ತಿದ್ದಾಗಲೇ ಶಿಕ್ಷಕನಿಗೆ ಹೃದಯಾಘಾತ

• ಪ್ರಜೋದಯ ವರದಿ

**ಅರಕಲಗೂಡು:** ಪಾಠ ಮಾಡುತ್ತಿದ್ದ ವೇಳೆ ಸರ್ಕಾರಿ ಶಾಲೆಯ ಮುಖ್ಯ ಶಿಕ್ಷಕ ಹೃದಯಾಘಾತದಿಂದ ಮೃತಪಟ್ಟಿರುವ ಘಟನೆ ತಾಲ್ಲೂಕಿನ ಕೆಬ್ಬೆಕೊಪ್ಪಲು ಗ್ರಾಮದಲ್ಲಿ ನಡೆದಿದೆ. ಕೇರಳಾಪುರ ಗ್ರಾಮದ ಸತೀಶ್ (53) ಮೃತಪಟ್ಟಿದ್ದಾರೆ.

ಸತೀಶ್ ಅವರು ಕೆಬ್ಬೆಕೊಪ್ಪಲು ಗ್ರಾಮದ ಸರ್ಕಾರಿ ಕಿರಿಯ ಪ್ರಾಥಮಿಕ ಶಾಲೆಯಲ್ಲಿ ಮುಖ್ಯ ಶಿಕ್ಷಕರಾಗಿ ಕೆಲಸ ಮಾಡುತ್ತಿದ್ದರು. ವಿದ್ಯಾರ್ಥಿಗಳಿಗೆ ಪಾಠ ಮಾಡುತ್ತಿದ್ದ ವೇಳೆ ಸತೀಶ್ ಏಕಾಏಕಿ ಅಸ್ವಸ್ಥಗೊಂಡು



ಕೊಠಡಿಯಲ್ಲೇ ಕುಸಿದು ಬಿದ್ದಿದ್ದಾರೆ. ವಿದ್ಯಾರ್ಥಿಗಳು ಹಾಗು ಸಹ ಶಿಕ್ಷಕರು ನೆರವಿಗೆ ಧಾವಿಸಿ ಆ್ಯಂಬುಲೆನ್ಸ್‌ಗೆ ಕರೆ ಮಾಡಿದ್ದಾರೆ. ಆದರೆ, ತೀವ್ರ ಹೃದಯಾಘಾತ ದಿಂದಾಗಿ ಮೃತಪಟ್ಟಿದ್ದಾರೆ.

ಶಿಕ್ಷಕರ ಅಕಾಲಿಕ ನಿಧನದಿಂದ ಶಾಲೆಯ ಶಿಕ್ಷಕರು ಹಾಗು ವಿದ್ಯಾರ್ಥಿಗಳು ಕಣ್ಣೀರಿಟ್ಟಿದ್ದಾರೆ. ಶಿಕ್ಷಣ ಇಲಾಖೆಯ ಅಧಿಕಾರಿಗಳು ಶಾಲೆಗೆ ಭೇಟಿ ನೀಡಿ ಮಾಹಿತಿ ಸಂಗ್ರಹಿಸಿ, ಕುಟುಂಬಸ್ಥರಿಗೆ ಸಾಂತ್ವನ ಹೇಳಿದ್ದಾರೆ.

# ರಸ್ತೆ, ಚರಂಡಿ ಕಾಮಗಾರಿಗೆ ಭೂಮಿ ಪೂಜೆ



• ಪ್ರಜೋದಯ ವರದಿ

**ಹಾಸನ:** ಗುಂಡೇಗೌಡನಕೊಪ್ಪಲು ಹಾಗು ಅಶೋಕ ನಗರದಲ್ಲಿ ರಸ್ತೆ, ಚರಂಡಿ ನಿರ್ಮಾಣ ಕಾಮಗಾರಿಗೆ ಭೂಮಿಪೂಜೆ ನೆರವೇರಿಸಿದ್ದು, ಗುಣಮಟ್ಟದ ಕೆಲಸ ಮಾಡುವಂತೆ ಗುತ್ತಿಗೆದಾರರಿಗೆ ಸೂಚಿಸಲಾಗಿದೆ ಎಂದು ಶಾಸಕ ಹೆಚ್.ಪಿ.ಸ್ವರೂಪ್ ಅವರು ಹೇಳಿದರು.

ಗುಂಡೇಗೌಡನಕೊಪ್ಪಲಿನಲ್ಲಿ 48 ಲ.ರೂ. ವೆಚ್ಚದ ರಸ್ತೆ ಹಾಗು ಅಶೋಕ ನಗರದಲ್ಲಿ 52 ಲ.ರೂ. ಮೊತ್ತದ ಚರಂಡಿ ಕಾಮಗಾರಿಗೆ ಭೂಮಿ ಪೂಜೆ ನೆರವೇರಿಸಿ ಮಾತನಾಡಿದ ಅವರು, ರಸ್ತೆ ಹಾಗು ಚರಂಡಿ ಕಾಮಗಾರಿ ಕೈಗೊಳ್ಳುವಂತೆ ಸ್ಥಳೀಯರು ಹಲವು ಬಾರಿ ಮನವಿ ಸಲ್ಲಿಸಿದ್ದರು. ಸಾರ್ವಜನಿಕ ಸಂಚಾರಕ್ಕೆ ರಸ್ತೆ ಅತ್ಯವಶ್ಯಕವಾಗಿದೆ. ಹಾಸನ ವಿಧಾನಸಭಾ ಕ್ಷೇತ್ರ ಅಭಿವೃದ್ಧಿಗೆ ಸರ್ವ ಪ್ರಯತ್ನ ನಡೆಸಲಾಗುತ್ತಿದೆ. ಗುಣಮಟ್ಟದೊಂದಿಗೆ ನಿಗದಿತ ಗಡುವಿನೊಳಗೆ ಕೆಲಸ ಮುಗಿಸುವಂತೆ ನಿರ್ದೇಶನ ನೀಡಲಾಗಿದೆ ಎಂದರು. ಪಕ್ಷದ ಮುಖಂಡರು ಹಾಗು ಸ್ಥಳೀಯರು ಹಾಜರಿದ್ದರು.

# ಅಲಂಕಾರ ಜವಾಬ್ದಾರಿ ಹೊತ್ತಿದ್ದ ಗುತ್ತಿಗೆದಾರನ ವಿರುದ್ಧ ಕ್ರಮ ಜರುಗಿಸಿ

• ಪ್ರಜೋದಯ ವರದಿ

**ಹೊಳೆನರಸೀಪುರ:** ಪಟ್ಟಣದ ಶ್ರೀ ಲಕ್ಷ್ಮಿ ನರಸಿಂಹಸ್ವಾಮಿ ರಥಕ್ಕೆ ಹೂವಿನ ಅಲಂಕಾರದ ಜವಾಬ್ದಾರಿ ವಹಿಸಿಕೊಂಡಿದ್ದ ಗುತ್ತಿಗೆದಾರ ಯಾರದೋ ಪ್ರಭಾವಕ್ಕೆ ಒಳಗಾಗಿ ಕಾಟಾಚಾರದ ಅಲಂಕಾರ ಮಾಡಿದ್ದು, ಆತನ ವಿರುದ್ಧ ಕ್ರಮ ಜರುಗಿಸ ಬೇಕೆಂದು ಸಂಸದ ಶ್ರೇಯಸ್ ಪಟೇಲ್ ಅವರು ಒತ್ತಾಯಿಸಿದರು.

ಸುದ್ದಿಗೋಷ್ಠಿಯಲ್ಲಿ ಬುಧವಾರ ಮಾತನಾಡಿದ ಅವರು, ರಥಕ್ಕೆ ಕಳೆದ 13 ವರ್ಷಗಳಿಂದ ಒಂದೇ ಬಟ್ಟೆ ಬಳಸುತ್ತಿದ್ದರು. ಅದನ್ನು ಬದಲಿಸಿ ಹೊಸ ಬಟ್ಟೆ ಹಾಕುವ ಕುರಿತು ಸ್ಥಳೀಯ ಶಾಸಕರು ವಿರೋಧ ವ್ಯಕ್ತ ಪಡಿಸಿದರು. ಧಾರ್ಮಿಕ ಕೈಂಕರ್ಯ ಕ್ಕೂ ರಾಜಕೀಯ ಸೋಂಕು ತಗುಲ ಬಾರದೆಂದು ನಾನು ಸುಮ್ಮನಿದ್ದೆ ಎಂದರು.

ಶಾಸಕರ ಸೂಚನೆ ಪಡೆದು ಜಾಥಾ ಕಾರ್ಯಕ್ರಮ ಹಮ್ಮಿಕೊಳ್ಳುವಂತೆ ತಹಶೀಲ್ದಾರ್‌ಗೆ ಹೇಳಿದ್ದೆ. ಜಿಲ್ಲಾಧಿ



ಕಾರಿ ಸಹ ಹೂವಿನ ಅಲಂಕಾರ ಮಾಡುವಂತೆ ಹೇಳಿದ್ದರು. ಅದರ ಜವಾಬ್ದಾರಿ ಹೊತ್ತಿದ್ದ ಗುತ್ತಿಗೆದಾರ ನಮಗೆ ಫೋಟೋ ತೋರಿಸಿ ಚೆಂದದ ಅಲಂಕಾರ ಮಾಡಿಸುತ್ತೇವೆಂದು ಹೇಳಿದ್ದರು. ಆದರೆ, ಫೋಟೋದಲ್ಲಿದ್ದಂತೆ ಅಲಂಕಾರ ಮಾಡದೆ ರಥ ಬೋಳು ಬೋಳಾಗಿ ಕಾಣುತ್ತಿತ್ತು. ರಥವನ್ನು ಸಿಂಗರಿಸಿದ ಗುತ್ತಿಗೆದಾರ ಯಾರದೋ ಪ್ರಭಾವಕ್ಕೆ ಒಳಗಾಗಿ ಅಲಂಕಾರ ಸರಿಯಾಗಿ ಮಾಡಿರಲಿಲ್ಲ. ಆತ ಏಕೆ ಹೀಗೆ ಮಾಡಿದ. ಅವನೇ ತೋರಿಸಿದ ರೀತಿಯಲ್ಲಿ ಅಲಂಕಾರ ಮಾಡಿಲ್ಲ. ಅದಕ್ಕೆ ಕಾರಣವೇನೆಂಬುದನ್ನು ಪತ್ತೆ ಮಾಡಬೇಕೆಂದು ಆಗ್ರಹಿಸಿದರು.

ರಥೋತ್ಸವಕ್ಕೆ ಸಹಾಯವಾಗಲಿ ಎಂದು 2 ಲಕ್ಷ ರೂ. ದೇಣಿಗೆ ನೀಡಿದ್ದೆ. ಅದನ್ನು ಶಾಸಕರಿಗೆ ಸಹಿಸಿಕೊಳ್ಳಲು ಸಾಧ್ಯವಾಗದೆ ಇಷ್ಟೆಲ್ಲಾ ಗೊಂದಲ ಸೃಷ್ಟಿಸಿದರು. ನಾನು ಹಣ ನೀಡಿದ್ದೇ ತಪ್ಪಾಯಿತಾ ಎಂದೆನಿಸಿತು. ಜಾತ್ರಾ ಮಹೋತ್ಸವದಲ್ಲಿ ಉಂಟಾದ ಗೊಂದಲಕ್ಕೆ ಸಾರ್ವಜನಿಕರ ಬಳಿ ನಾನು ಕ್ಷಮೆಯಾಚಿಸುತ್ತೇನೆಂದರು.

ಚುನಾವಣೆ ಬಂದಾಗ ರಾಜಕೀಯ ಮಾಡೋಣ, ಜನರ ತೀರ್ಪಿನ ಅನುಗುಣವಾಗಿ ನಡೆದುಕೊಂಡು ಕ್ಷೇತ್ರದ ಅಭಿವೃದ್ಧಿಗೆ ಶ್ರಮಿಸುವುದು ಆದ್ಯತೆಯಾಗಬೇಕು. ಈ ವಿಷಯದಲ್ಲಿ ಶಾಸಕರ ಸಲಹೆ ನೀಡಿದರೆ ಖಂಡಿತವಾಗಿ ಸ್ವೀಕರಿಸುತ್ತೇನೆ. ತಾಲ್ಲೂಕಿನಲ್ಲಿ ನಡೆಯುವ ಸಭೆಗಳಿಗೆ ಶಾಸಕರು ಅಧ್ಯಕ್ಷತೆ ವಹಿಸುತ್ತಾರೆ. ದಿಶಾ ಸಭೆಗಳು ಸಂಸದರ ಅಧ್ಯಕ್ಷತೆಯಲ್ಲಿ ನಡೆಯುತ್ತವೆ. ಶಾಸಕ ರೇವಣ್ಣ ಅವರು ಎರಡು ವರ್ಷಗಳಿಂದ ನನ್ನ ಅಧ್ಯಕ್ಷತೆಯ ಒಂದೂ ಸಭೆಗೆ ಹಾಜರಾಗಿಲ್ಲ. ನಾನು ಸಂಸದನಾಗಿರುವುದನ್ನು ಸಹಿಸಿಕೊಳ್ಳಲು ಅವರಿಂದ ಸಾಧ್ಯವಾಗುತ್ತಿಲ್ಲ. ಮತದಾರರ ತೀರ್ಮಾನಕ್ಕೆ ಎಲ್ಲರೂ ಬೆಲೆ ಕೊಡಬೇಕಲ್ಲವೇ ಎಂದು ಕಿಡಿಕಾರಿದರು.

ಕಳೆದ ವರ್ಷ ಹಾಸನಾಂಬ ಜಾತ್ರೆ ನಡೆಸಲು ಜಿಲ್ಲಾಧಿಕಾರಿಗೆ ಸಂಪೂರ್ಣ ಸ್ವಾತಂತ್ರ್ಯ ನೀಡಿದ್ದೆವು. ಯಾವ ಗೊಂದಲವಿಲ್ಲದೆ ಮಹೋತ್ಸವ ನಡೆಯಿತು. ದೇವರ ಉತ್ಸವಗಳಲ್ಲಿ ರಾಜಕೀಯ ಬೆರೆಸುವುದು ಸರಿಯಲ್ಲವೆಂದು ಆಕ್ರೋಶ ವ್ಯಕ್ತಪಡಿಸಿದರು.

### 7 ರಂದು ಯುವ ಉದ್ಯೋಗ ಮೇಳ

ಹಾಸನ : ನಗರದ ಸರ್ಕಾರಿ ಇಂಜಿನೀಯರಿಂಗ್ ಕಾಲೇಜು ಆವರಣದಲ್ಲಿ ಮಾ.7 ರಂದು ಯುವ ಉದ್ಯೋಗ ಮೇಳ ಆಯೋಜಿಸಲಾಗಿದೆ ಎಂದು ಸಂಸದ ಶ್ರೇಯಸ್ ಪಟೇಲ್ ಅವರು ಹೇಳಿದರು.

ಬುಧವಾರ ಸಂಸದ ಕಚೇರಿಯಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಉದ್ಯೋಗ ಮೇಳಕ್ಕೆ ಜಿಲ್ಲಾಡಳಿತ ಸಕಲ ಸಿದ್ಧತೆ ಮಾಡಿಕೊಂಡಿದ್ದು, ನಿರುದ್ಯೋಗ ಯುವಕ-ಯುವತಿಯರು ಕಾರ್ಯಕ್ರಮದ ಸದುಪಯೋಗ ಪಡೆದುಕೊಳ್ಳಬೇಕು. ಮೇಳದಲ್ಲಿ ಸುಮಾರು 100 ಕಂಪನಿಗಳು ಭಾಗವಹಿಸಲಿವೆ. ಯುವಕ-ಯುವತಿಯರಿಗೆ ನೇರ ಸಂದರ್ಶನಕ್ಕೆ ಅವಕಾಶವಿದ್ದು, ಅಂಕಪಟ್ಟಿ ಸೇರಿ ಇತರೆ ದಾಖಲೆಗಳೊಂದಿಗೆ ಆಗಮಿಸುವಂತೆ ಕೋರಿದರು.

ಎಸ್‌ಎಸ್‌ಎಲ್‌ಸಿ, ಪಿಯುಸಿ, ಯಾವುದೇ ಪದವಿ, ಐಟಿಐ, ಡಿಪ್ಲೊಮಾ ಅಭ್ಯರ್ಥಿಗಳು ಪಾಲ್ಗೊಳ್ಳಬಹುದು. ಆಯ್ಕೆಯಾದವರಿಗೆ ಸ್ಥಳದಲ್ಲೇ ನೇಮಕ ಆದೇಶ ಪತ್ರ ನೀಡಲಾಗುವುದು. ಸಂದರ್ಶನಕ್ಕೆ ಆಗಮಿಸುವ ಅಭ್ಯರ್ಥಿಗಳಿಗೆ ಊಟ, ಕುಡಿಯುವ ನೀರು ವ್ಯವಸ್ಥೆ ಮಾಡಲಾಗುತ್ತಿದೆ ಎಂದರು.

# ನಾಳೆ ತೋಟಗಾರಿಕೆ ಇಲಾಖೆಯಿಂದ ಕ್ಷೇತ್ರ ಭೇಟಿ

• ಪ್ರಜೋದಯ ವರದಿ

**ಬೇಲೂರು:** ತೋಟಗಾರಿಕೆ ಇಲಾಖೆ ವತಿಯಿಂದ ಮಾ.6ರ ಶುಕ್ರವಾರ ಹಳೇಬೀಡು ಹೋಬಳಿ ಘಟ್ಟದಹಳ್ಳಿ ಗ್ರಾಮ ಪಂಚಾಯಿತಿ ವ್ಯಾಪ್ತಿಯ ಗ್ರಾಮಗಳಲ್ಲಿ ಕ್ಷೇತ್ರ ಭೇಟಿ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ.

ಹಾಸನ ತೋಟಗಾರಿಕೆ ಸಂಶೋಧನಾ ಕೇಂದ್ರದ ವಿಜ್ಞಾನಿ ಡಾ. ಎಸ್. ಕೆ.ನಟರಾಜು ಅವರು ಇಲಾಖೆ ಅಧಿಕಾರಿಗಳೊಂದಿಗೆ ಬೆಳಿಗ್ಗೆ 11 ಗಂಟೆಗೆ ಕ್ಷೇತ್ರ ಭೇಟಿ ಕಾರ್ಯಕ್ರಮದಡಿ ಬೆಳೆಗಳಲ್ಲಿ ಕಂಡುಬರುವ ಕೀಟ, ರೋಗ ನಿಯಂತ್ರಣ ಮತ್ತು ನೀರು, ಪೋಷಕಾಂಶ ನಿರ್ವಹಣೆ, ಸಮಗ್ರ ಬೇಸಾಯ ಕ್ರಮಗಳ ಕುರಿತು ರೈತರಿಗೆ ಕ್ಷೇತ್ರ ಮಟ್ಟದಲ್ಲಿ ತಾಂತ್ರಿಕ ಮಾಹಿತಿ ಹಾಗು ಪ್ರಾತ್ಯಕ್ಷಿಕೆ ಕೈಗೊಳ್ಳಲಿದ್ದಾರೆ.

ರೈತರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ ಕಾರ್ಯಕ್ರಮದ ಮಾಹಿತಿ ಪಡೆದು ಕಾರ್ಯಕ್ರಮದ ಸದುಪಯೋಗ ಪಡೆಯಬೇಕೆಂದು ಹಿರಿಯ ಸಹಾಯಕ ತೋಟಗಾರಿಕೆ ನಿರ್ದೇಶಕ ಸತೀಶ್ ಕೋರಿದ್ದಾರೆ.

## ಅಸಮತೋಲನ ಸರಿಪಡಿಸಲು ವೇದಿಕೆ ರಚನೆಯಾಗಲಿ



• ಪ್ರಜೋದಯ ವರದಿ

**ಬೆಂಗಳೂರು:** ಕೇಂದ್ರ ಮತ್ತು ರಾಜ್ಯಗಳ ನಡುವಿನ ಅಧಿಕಾರ ಹಾಗು ಆರ್ಥಿಕ ಹಂಚಿಕೆಯ ಅಸಮತೋಲನ ಸರಿಪಡಿಸಲು ಬಲವಾದ ಸಾಂಸ್ಥಿಕ ವೇದಿಕೆಯೊಂದನ್ನು ರಚಿಸಬೇಕಿದೆಯೆ ತಮಿಳುನಾಡು ಮುಖ್ಯಮಂತ್ರಿ ಎಂ.ಕೆ. ಸ್ಟಾಲಿನ್ ಅವರಿಗೆ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಪತ್ರ ಬರೆದಿದ್ದಾರೆ.

ಪ್ರಸ್ತುತ ನಿಷ್ಕ್ರಿಯವಾಗಿರುವ ಅಂತಾರಾಜ್ಯ ಮಂಡಳಿಯನ್ನು ತಕ್ಷಣ ಪುನರುಜ್ಜೀವನಗೊಳಿಸಿ, ಸಮಾನ ಮನಸ್ಕ ರಾಜ್ಯಗಳು ಒಟ್ಟುಗೂಡಿ ತಮ್ಮ ಸಮಸ್ಯೆಗಳನ್ನು ಮುಕ್ತವಾಗಿ ಚರ್ಚಿಸಲು ಅವಕಾಶ ಕಲ್ಪಿಸಬೇಕಿದೆ ಎಂದು ಅವರು ತಿಳಿಸಿದ್ದಾರೆ.

# 5 ಲಕ್ಷ ಗಿಡ ಬೆಳೆಸಲು 'ಹಸಿರು ಹಾಸನ' ಸಂಕಲ್ಪ

### ಕ್ರಿಯಾಯೋಜನೆ ಹಾಗೂ ಸರ್ಕಾರಿ ಜಾಗಗಳನ್ನು ಗುರುತಿಸಲು ಜಿಲ್ಲಾಧಿಕಾರಿ ಕೆ.ಎಸ್.ಲತಾಕುಮಾರಿ ಸೂಚನೆ

• ಪ್ರಜೋದಯ ವರದಿ

**ಹಾಸನ:** ಹಸಿರು ಹಾಸನ ಸಂಕಲ್ಪದೊಂದಿಗೆ ನಗರ ಸ್ಥಳೀಯ ಸಂಸ್ಥೆಗಳು ಹಾಗೂ ಗ್ರಾಮ ಪಂಚಾಯಿತಿ ವ್ಯಾಪ್ತಿಯಲ್ಲಿರುವ ಸರ್ಕಾರಿ ಜಾಗಗಳು, ಕಚೇರಿಗಳ ಆವರಣದಲ್ಲಿ 5 ಲಕ್ಷ ಗಿಡಗಳನ್ನು ಬೆಳೆಸಲು ಅಗತ್ಯ ಕ್ರಮ ಕೈಗೊಳ್ಳಲು ಅಧಿಕಾರಿಗಳಿಗೆ ಜಿಲ್ಲಾಧಿಕಾರಿ ಕೆ.ಎಸ್.ಲತಾಕುಮಾರಿ ಅವರು ತಿಳಿಸಿದರು.

ಜಿಲ್ಲಾಧಿಕಾರಿ ಕಚೇರಿ ಸಭಾಂಗಣದಲ್ಲಿ ಬುಧವಾರ ಜಿಲ್ಲೆಯ ಎಲ್ಲಾ ನಗರ ಸ್ಥಳೀಯ ಸಂಸ್ಥೆಗಳ ವ್ಯಾಪ್ತಿಯಲ್ಲಿ ವಿವಿಧ ಯೋಜನೆಯಡಿ ಹಾಗೂ ತೆರಿಗೆಗಳ ವಸೂಲಾತಿ ಹಾಗೂ ಎ.ಬಿ.ಸಿ. ನಿಯಮ ಅನುಷ್ಠಾನದಲ್ಲಿ ಸಾಧಿಸಿರುವ ಪ್ರಗತಿ ಪರಿಶೀಲನಾ ಸಭೆ ಹಾಗೂ ಹಸಿರು ಹಾಸನ 2026ರ ನಿರ್ಮಾಣ ಕುರಿತು ಸಭೆ ನಡೆಸಿ ಮಾತನಾಡಿದ ಅವರು, ಜಿಲ್ಲೆಯ ಎಲ್ಲಾ ನಗರ ಸ್ಥಳೀಯ ಸಂಸ್ಥೆಗಳು ಹಾಗೂ ಗ್ರಾಮ ಪಂಚಾಯಿತಿಗಳ ವ್ಯಾಪ್ತಿಯಲ್ಲಿ ಇರುವ ಸರ್ಕಾರಿ ಕಚೇರಿಗಳು, ಸರ್ಕಾರಿ ಜಮೀನು ಹಾಗೂ ಶಾಲೆಗಳು ಆವರಣಗಳಿಗೆ ಸುಮಾರು 5 ಲಕ್ಷ ಹಣ್ಣಿನ ಹಾಗೂ ಇತರೆ ಗಿಡಗಳನ್ನು ನೆಟ್ಟು ಬೆಳಸಲು ಕ್ರಿಯಾಯೋಜನೆ ಹಾಗೂ ಜಾಗಗಳು ಗುರುತಿಸಲು ಸೂಚಿಸಿದರು.

ಒಂದು ಗಿಡ ಬೆಳೆಸಿ ಮರವನ್ನಾಗಿಸಿದರೆ ನೂರಾರು ಪಕ್ಷಿಗಳಿಗೆ ಆಶ್ರಯ ತಾಣವಾಗುತ್ತದೆ, ಪ್ರಾಣಿಗಳಿಗೆ ನೆರಳಾಗುತ್ತದೆ,ಆಮ್ಲಜನಕ ಸಿಗುತ್ತದೆ ಹಾಗೂ ಹಣ್ಣಿನ ಮರವಾದರೆ ಹಣ್ಣು ಸಿಗುತ್ತದೆ, ಆದ್ದರಿಂದ ಗಿಡಗಳನ್ನು ನೆಟ್ಟು ಬೆಳಸಬೇಕು ಎಂದರು.

ಜಿಲ್ಲೆಯಲ್ಲಿರುವ ಪ್ರತಿ ಗ್ರಾಮ ಪಂಚಾಯಿತಿಗಳಿಗೆ 2000 ಗಿಡಗಳನ್ನು ನಿಗದಿ ಪಡಿಸುವಂತೆ ಹಾಗೂ ಮಹಾ ನಗರ ಪಾಲಿಕೆ, ನಗರಸಭೆ, ಪಟ್ಟಣ ಪಂಚಾಯಿತಿ ವ್ಯಾಪ್ತಿಯಲ್ಲಿ ನಗರ ರಸ್ತೆಗಳ ಬದಿಯಲ್ಲಿ ಗಿಡಗಳನ್ನು ಹೆಚ್ಚಾಗಿ ಬೆಳಸಬೇಕು, ಹಸಿರು ಹಾಸನ ಜಿಲ್ಲೆಯ ನಿರ್ಮಾಣಕ್ಕೆ ಎಲ್ಲಾ ಅಧಿಕಾರಿಗಳು ಸಂಕಲ್ಪ ಮಾಡಬೇಕು ಎಂದು ಸಲಹೆ ನೀಡಿದರು.




ಸಭೆ ಸಮಾರಂಭಗಳಲ್ಲಿ ಹೂವಿನ ಹಾರ ಬೊಕ್ಕೆ ಶಾಲು ನೀಡುವ ಬದಲಾಗಿ ಹಣ್ಣಿನ ಗಿಡ ಸೇರಿದಂತೆ ಇತರೆ ಯಾವುದೇ ಗಿಡವನ್ನು ನೀಡುವುದರಿಂದ ಗಿಡ ಮರಗಳನ್ನು ಬೆಳೆಸಿದಂತಾಗುತ್ತದೆ ಎಂದು ತಿಳಿಸಿದರು

ಹಾಸ್ಟೆಲ್‌ಗಳು ಆವರಣದಲ್ಲಿ, ವಸತಿ ಶಾಲೆಗಳ ಆವರಣದಲ್ಲಿ ಹಾಗೂ ಸರ್ಕಾರಿ ಗೋಮಾಳ,ಕೆರೆಗಳ ಸುತ್ತ ಚಿಕ್ಕ ಉದ್ಯಾನವನ ಗಿಡಗಳನ್ನು ನೆಡುವ ಕೆಲಸವಾಗಬೇಕು ಎಂದರು.

ಬೀದಿ ನಾಯಿಗಳ ಆವಳಿಯನ್ನು ತಪ್ಪಿಸಲು ಸುಪ್ರೀಂ ಕೋರ್ಟ್ ಆದೇಶದಂತೆ ಹಾಗೂ ಸರ್ಕಾರದ ಕಾರ್ಯದರ್ಶಿಯವರ ನಿರ್ದೇಶನ ಕಡ್ಡಾಯವಾಗಿ ಸ್ಥಳೀಯ ಸಂಸ್ಥೆಗಳಿಗೆ ಪಾಲಿಸಬೇಕು, ಕಚೇರಿ, ಖಾಸಗಿ ಸಂಸ್ಥೆಗಳ ಆವರಣದಲ್ಲಿ ಬೀದಿ ನಾಯಿಗಳು ಇಲ್ಲದಂತೆ ನೋಡಿಕೊಳ್ಳುವುದು ಕಚೇರಿ ಸಂಸ್ಥೆಗಳ ಮುಖ್ಯಸ್ಥರ ಜವಾಬ್ದಾರಿಯಾಗಿರುತ್ತದೆ, ಕಾಂಪೌಂಡ್ ನಿರ್ಮಾಣ ಮಾಡಿಕೊಂಡು ನಾಯಿಗಳು ವಾಸವಿರದಂತೆ ನೋಡಿಕೊಳ್ಳಬೇಕು ಎಂದು ತಿಳಿಸಿದರು.

ರಸ್ತೆಗಳು, ಫುಟ್‌ಪಾತ್‌ಗಳನ್ನು ತೆರವುಗೊಳಿಸಿ ಸಾರ್ವಜನಿಕರ ಸಂಚಾರಕ್ಕೆ ಅನುವು ಮಾಡಿಕೊಡಬೇಕು, ಜಾನುವಾರುಗಳನ್ನು ರಸ್ತೆಗೆ ಬಿಡುವುದರಿಂದ ಅಪಘಾತಗಳು ಹೆಚ್ಚಾಗುತ್ತಿವೆ. ರಸ್ತೆಗಳಿಗೆ ಜಾನುವಾರುಗಳನ್ನು ಬಿಡುವುದನ್ನು ತಡೆಯಬೇಕು, ಮಾಲೀಕರಿಲ್ಲದ ಜಾನುವಾರುಗಳು ಗೋಶಾಲೆಗೆ ಸ್ಥಳಾಂತರಿಸಬೇಕು, ಜಾನುವಾರುಗಳನ್ನು ರಸ್ತೆಗಳಿಗೆ ಬಿಡುವ ಮಾಲೀಕರಿಗೆ ನೋಟಿಸ್ ನೀಡುವಂತೆ ತಿಳಿಸಿದರು.

ಸಭೆಯಲ್ಲಿ ಜಿಲ್ಲಾ ನಗರಾಭಿವೃದ್ಧಿ ಕೋಶದ ಯೋಜನಾ ನಿರ್ದೇಶಕ ರುದ್ರಮುನಿ ಸೇರಿದಂತೆ ಮತಿತ್ತರರು ಹಾಜರಿದ್ದರು.

## ಏತ ನೀರಾವರಿ ಮರು ಚಾಲನೆಗೆ ಕ್ರಮ



• ಪ್ರಜೋದಯ ವರದಿ

**ಆಲೂರು:** ತಾಲ್ಲೂಕಿನಲ್ಲಿ ಸ್ಥಗಿತಗೊಂಡಿರುವ ಮೂರು ಏತ ನೀರಾವರಿ ಯೋಜನೆಗಳಿಗೆ ಸದ್ದದಲ್ಲೆ ದುರಸ್ತಿಗೊಳಿಸಿ ಚಾಲನೆ ನೀಡಲಾಗುವುದು ಎಂದು ಶಾಸಕ ಸಿಮೆಂಟ್ ಮಂಜು ಅವರು ತಿಳಿಸಿದರು.

ಪಾಳ್ಯ ಗ್ರಾಮ ಪಂಚಾಯಿತಿ ಸಿಂಗಾಪುರ ಏತ ನೀರಾವರಿ ಯೋಜನೆ ಸ್ಥಗಿತಗೊಂಡಿರುವ ಸ್ಥಳ ಪರಿಶೀಲಿಸಿದ ನಂತರ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, 1980ರ ದಶಕದಲ್ಲಿ ಬಸವನಪುರ, ಕಟ್ಟಾಯ ಹೋಬಳಿ ಉಪ್ಪಳ್ಳಿ ಬಳಿ ನಿರ್ಮಾಣ ಮಾಡಿರುವ ಯೋಜನೆಗಳು ಸುಮಾರು ಐದು ದಶಕಗಳಿಂದ ಸ್ಥಗಿತಗೊಂಡಿವೆ. ಈ ಯೋಜನೆಗಳು ನೆನೆಗುದಿಗೆ ಬಿದ್ದಿರುವ ಸ್ಥಳಗಳನ್ನು ಅಧಿಕಾರಿಗಳ ಸಮ್ಮುಖದಲ್ಲಿ ಪರಿಶೀಲನೆ ಮಾಡಿದ್ದೇನೆ. ಯೋಜನೆಗಳ ಮರು ಚಾಲನೆಗೆ ಅಂದಾಜು ಪಟ್ಟಿ ತಯಾರು ಮಾಡಲು ಅಧಿಕಾರಿಗಳಿಗೆ ಸೂಚಿಸಿದ್ದೇನೆ.

ಲಿಫ್ಟ್ ಇರಿಗೇಷನ್‌ಗೆ ಸಂಬಂಧಪಟ್ಟ ಹಲವು ಯೋಜನೆಗಳೂ ಸಹ ನೆನೆಗುದಿಗೆ ಬಿದ್ದಿವೆ. ಇವುಗಳಿಗೂ ಸಹ ಮರು ಚಾಲನೆ ನೀಡಲಾಗುವುದು. ಯೋಜನೆಗಳು ಸಾಕಾರವಾದರೆ ಸುಮಾರು 1 ಸಾವಿರ ಎಕರೆಗೂ ಹೆಚ್ಚು ನೀರಾವರಿ ಪ್ರದೇಶವಾಗುತ್ತದೆ. ರೈತರಿಗೆ ಅನುಕೂಲವಾಗುವ ಎಲ್ಲ ಯೋಜನೆಗಳನ್ನು ಹಂತ ಹಂತವಾಗಿ ಕೈಗೆತ್ತಿಕೊಳ್ಳಲಾಗುವುದು ಎಂದರು.

## ಪ್ರಾಥಮಿಕ ಕೃಷಿ ಪತ್ತಿನ ಅಧ್ಯಕ್ಷರಾಗಿ ಡಿ.ಟಿ.ಸತೀಶ್

• ಪ್ರಜೋದಯ ವರದಿ

**ಚನ್ನರಾಯಪಟ್ಟಣ:** ತಾಲ್ಲೂಕಿನ ದಂಡಿಗನಹಳ್ಳಿ ಹೋಬಳಿ, ಕುಂದೂರು ಮಠದಲ್ಲಿನ ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘದ ಅಧ್ಯಕ್ಷ ಸ್ಥಾನಕ್ಕೆ ಬುಧವಾರ ನಡೆದ ಚುನಾವಣೆಯಲ್ಲಿ ಜೆಡಿಎಸ್ ಬೆಂಬಲಿತ ನಿರ್ದೇಶಕ ದೊಡ್ಡಕರಡೇವು ಗ್ರಾಮದ ಡಿ.ಟಿ.ಸತೀಶ್ ಅವರು ಅವಿರೋಧವಾಗಿ ಆಯ್ಕೆಯಾದರು.

ಕುಂದೂರು ಮಠದ ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘಕ್ಕೆ ಈ ಹಿಂದೆ ಅಧ್ಯಕ್ಷರಾಗಿದ್ದ ಬಿ.ಆರ್. ಹರೀಶ್ ರಾಜೀನಾಮೆ ನೀಡಿದ್ದರಿಂದ ತೆರವಾದ ಸ್ಥಾನಕ್ಕೆ ಚುನಾವಣೆ ನಡೆಯಿತು. ಡಿ.ಟಿ.ಸತೀಶ್ ಹೊರತುಪಡಿಸಿ ಬೇರೆ ಯಾವ ನಿರ್ದೇಶಕರು ನಾಮಪತ್ರ ಸಲ್ಲಿಸದೆ ಇದುದ್ದರಿಂದ ಇವರ ಆಯ್ಕೆಯನ್ನು ಚುನಾವಣಾಧಿಕಾರಿ ವಿಜಯೇಂದ್ರ ಘೋಷಿಸಿದರು.



ನೂತನ ಅಧ್ಯಕ್ಷ ಪಟೇಲ್ ಡಿ.ಟಿ. ಸತೀಶ್ ಮಾತನಾಡಿ, ಪ್ರಸ್ತುತ ಸಂಘದಲ್ಲಿ ವ್ಯಾಪ್ತಿಗೆ ಒಳಪಡುವ 1350 ರೈತರಿಗೆ ಶೂನ್ಯ ಬಡ್ಡಿ ದರದಲ್ಲಿ 7.5 ಕೋಟಿ ರೂ. ಸಾಲ ಮತ್ತು 16 ಸ್ತ್ರೀಶಕ್ತಿ ಸಂಘಗಳಿಗೆ 50 ಲಕ್ಷ ರೂ. ಸಾಲ ನೀಡಲಾಗಿದೆ. ಸಾಲ ತೀರುವಳಿಯೂ ಶೇ.100ರಷ್ಟಿದ್ದು, ಮುಂಬರುವ ದಿನಗಳಲ್ಲಿ ಹೊಸ ರೈತರಿಗೆ ಸಾಲ ನೀಡಲು ಕ್ಷೇತ್ರದ ಶಾಸಕರಾದ ಹೆಚ್.ಡಿ.ರೇವಣ್ಣನವರು, ಮತ್ತು ವಿಧಾನಪರಿಷತ್ತು ಸದಸ್ಯರು ಹಾಗೂ ಆಪೆಕ್ಸ್ ಬ್ಯಾಂಕ್ ನಿರ್ದೇಶಕರಾದ ಡಾ. ಸೂರಜ್ ರೇವಣ್ಣನವರ ಸಹಕಾರ ಕೋರಲಾಗುತ್ತದೆ. ಜೊತೆಗೆ ಸಂಘದ ಬಲವರ್ಧನೆಗೆ ಹೆಚ್ಚು ಶ್ರಮಿಸುವುದಾಗಿ ತಿಳಿಸಿದ ಅವರು, ತಮ್ಮನ್ನು ಸಂಘಕ್ಕೆ ಅಧ್ಯಕ್ಷರಾಗಿ ಅವಿರೋಧವಾಗಿ ಆಯ್ಕೆಯಾಗಲು ಸಹಕರಿಸಿದ ಸಂಘದ ಉಪಾಧ್ಯಕ್ಷರು, ಸೇರಿ ಎಲ್ಲ ನಿರ್ದೇಶಕರು ಮತ್ತು ಅರ್ಶಿವದಿಸಿದ ಶಾಸಕ ಹೆಚ್.ಡಿ.ರೇವಣ್ಣ ಹಾಗೂ ಡಾ. ಸೂರಜ್ ರೇವಣ್ಣನವರಿಗೆ ಕೃತಜ್ಞತೆ ಸಲ್ಲಿಸುವುದಾಗಿ ಹೇಳಿದರು.

ಟಿಎಪಿಸಿಎಂಎಸ್ ನಿರ್ದೇಶಕ ನಟ್ಟೇಕೆರೆ ನಾಗರಾಜು, ತಾ.ಪಂ.ಮಾಜಿ ಸದಸ್ಯ ಗ್ಯಾರಹಳ್ಳಿ ರವೀಶ್, ಎಪಿಎಂಸಿ ಮಾಜಿ ಅಧ್ಯಕ್ಷ ರಂಗಸ್ವಾಮಿ, ಮಾಜಿ ನಿರ್ದೇಶಕ ಸತೀಶ್, ದೊಡ್ಡಕರಡೇವು ಗ್ರಾ.ಪಂ.ಮಾಜಿ ಅಧ್ಯಕ್ಷ ಮಧು ಕರಡೇವು, ಬಳದರೆ ಗ್ರಾ.ಪಂ. ಮಾಜಿ ಅಧ್ಯಕ್ಷ ಅನಂತ್‌ಕುಮಾರ್, ಅರಣ್ಯ ಸಮಿತಿ ಸದಸ್ಯ ವೆಂಕಟರಮಣ ಸ್ವಾಮಿ, ಸಂಘದ ಉಪಾಧ್ಯಕ್ಷ ಡಿ. ಜಗದೀಶ್, ನಿರ್ದೇಶಕರಾದ ಬಿ.ಆರ್. ಹರೀಶ್, ನಿಂಗೇಗೌಡ, ಸಿ.ಎಂ.ಮಂಜುನಾಥ್, ಡಿ.ಎಲ್.ಸೋಮಶೇಖರ್, ಸಣ್ಣೇಗೌಡ ಇನ್ನಿತರರಿದ್ದರು.

## ವಿದ್ಯಾರ್ಥಿಗಳಿಗೆ ಓದುವ ಹಂಬಲ-ಸಾಧಿಸುವ ಛಲ ಇರಬೇಕು

• ಪ್ರಜೋದಯ ವರದಿ

**ಶ್ರವಣಬೆಳಗೊಳ:** ವಿದ್ಯಾರ್ಥಿಗಳಿಗೆ ಓದುವ ಹಂಬಲ ಹಾಗೂ ಸಾಧಿಸುವ ಛಲ ಇರಬೇಕು. ತಮಗೆ ದೊರಕಿರುವ ಸಮಯವನ್ನು ಸದುಪಯೋಗಪಡಿಸಿಕೊಂಡು ಸದಾ ಚಟುವಟಿಕೆಯಿಂದ ತೊಡಗಿಸಿಕೊಂಡರೆ ಸಿ.ವಿ.ರಾಮನ್, ನ್ಯೂಟನ್, ಐನ್‌ಸ್ಟೀನ್ ಅವರಂತೆ ಸಾಧನೆ ಮಾಡಲು ಸಾಧ್ಯವಾಗುತ್ತದೆ ಎಂದು ನಿವೃತ್ತ ಪ್ರಾಂಶುಪಾಲ ಶಿವಣ್ಣ ಅವರು ಹೇಳಿದರು.

ಪಟ್ಟಣದ ಶ್ರೀ ಅಂಬಿಕಾ ಶಾಲೆಯಲ್ಲಿ ಆಯೋಜಿಸಿದ್ದ ವಿಜ್ಞಾನ ದಿನ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದ ಅವರು, ಭಾರತದ ಮಾಜಿ ರಾಷ್ಟ್ರಪತಿ ಡಾ. ಎ.ಪಿಜೆ. ಅಬ್ದುಲ್ ಕಲಾಂ ಅವರ ನಾಲ್ಕು ತತ್ವಗಳಾದ ಇಂದಿನ ದಿನ ನಮ್ಮದು, ತಂದೆ-ತಾಯಿಗಳು ಹಾಗೂ ಗುರು-ಹಿರಿಯರ ಆಶೀರ್ವಾದ ನಮಗಿದೆ, ದೇವರು ನನ್ನ ಜೊತೆ ಇದ್ದಾನೆ, ನಾನು ಸಾಧನೆ ಮಾಡುತ್ತೇನೆ ಎಂಬ ತತ್ವಗಳನ್ನು ರೂಢಿಸಿಕೊಂಡರೆ ಏನನ್ನಾದರೂ ಸಾದಿಸಬಹುದು ಎಂದರು.




ಮುಖ್ಯ ಶಿಕ್ಷಕಿ ಸರೋಜ ಅವರು ಮಾತನಾಡಿ, ಮಕ್ಕಳು ಮೊಬೈಲ್ ಹಾಗೂ ಟಿವಿಗೆ ದಾಸರಾಗದೇ ಪುಸ್ತಕ ಓದುವ ಅಭ್ಯಾಸ ರೂಢಿಸಿಕೊಳ್ಳಬೇಕು. ಅಲ್ಲದೇ ಮನೆಯಲ್ಲೇ ದೊರಕುವ ವಸ್ತಗಳಿಂದ ವಿಜ್ಞಾನದ ಆವಿಷ್ಕಾರಗಳನ್ನು ಮಾಡುವ ಅಭ್ಯಸಗಳನ್ನು ಮೈಗೂಡಿಸಿಕೊಳ್ಳಬೇಕು ಎಂದು ಅವರು ತಿಳಿಸಿದರು.

ನವೋದಯ ಅನುದಾನಿತ ಪ್ರೌಢ ಶಾಲೆಯ ವಿಜ್ಞಾನ ಶಿಕ್ಷಕ ಕೆ.ಎಸ್. ಅನಂತಸ್ವಾಮಿ ಅವರು ಮಾತನಾಡಿದರು. ವಿದ್ಯಾರ್ಥಿಗಳು ಹೃದಯ, ಮೂತ್ರ ಜನಕಾಂಗ, ಹಸಿರುಮನೆ ಪರಿಣಾಮ, ಜೆಸಿಬಿ, ಜಲಚಕ್ರ, ರೋಬೋಟ್, ಗಗನಯಾತ್ರಿ, ಮಳೆ ಕೊಯ್ಲು ಮೊದಲಾದ 60 ಕ್ಕೂ ಹೆಚ್ಚು ವಿಜ್ಞಾನ ಮಾದರಿಯನ್ನು ತಯಾರಿಸಿ ಪ್ರದರ್ಶನ ಹಾಗೂ ವಿವರಣೆ ನೀಡಿದರು.

ಈ ಸಂದರ್ಭದಲ್ಲಿ ವಿಜ್ಞಾನ ದಿನದ ಅಂಗವಾಗಿ ಆಯೋಜಿಸಿದ್ದ ರಸಪ್ರಶ್ನೆ ಸ್ಪರ್ಧೆಯಲ್ಲಿ ವಿಜೇತರಾದ ವಿದ್ಯಾರ್ಥಿಗಳಿಗೆ ಬಹುಮಾನ ವಿತರಿಸಲಾಯಿತು.

ಕಾರ್ಯಕ್ರಮದಲ್ಲಿ ಬಾಹುಬಲಿ ಶಿಕ್ಷಣ ಸಂಸ್ಥೆಯ ಅಧ್ಯಕ್ಷ ಉದಯ ಕುಮಾರ್ ಇರ್ವತ್ತೂರು, ಕಾರ್ಯದರ್ಶಿ ಬಬನ್ ಪಿ. ದತ್ತವಾಡೆ, ಶಿಕ್ಷಕರಾದ ಬಾಹುಬಲಿ, ರಮ್ಯಾ, ಪವಿತ್ರ, ಪದ್ಮರಾಜ್, ಶ್ರೀಧರ್, ದಿವ್ಯಾ, ಪ್ರೇಮ ಪ್ರಶಾಂತ್, ಮನು ಜೈನ್ ಉಪಸ್ಥಿತರಿದ್ದರು.

## ವಿಜ್ಞಾನ ವಸ್ತು ಪ್ರದರ್ಶನ ಮೇಳ



**ಹಾಸನ: ನಗರದ ಬ್ರಿಲಿಯಂಟ್ ಪಬ್ಲಿಕ್ ಶಾಲೆಯಲ್ಲಿ ರಾಷ್ಟ್ರೀಯ ವಿಜ್ಞಾನ ದಿನದ ಅಂಗವಾಗಿ ವಿಜ್ಞಾನ ವಸ್ತು ಪ್ರದರ್ಶನ ಮೇಳ ನಡೆಯಿತು. ವಿದ್ಯಾರ್ಥಿಗಳು ವಿವಿಧ ವಿಜ್ಞಾನ ಮಾದರಿಗಳನ್ನು ತಯಾರು ಮಾಡಿ ಪ್ರದರ್ಶನ ನೀಡಿದರು. ಪ್ರಾಂಶುಪಾಲ ಜವರಾಜೇಗೌಡ ಮತ್ತಿತರರು ಈ ವೇಳೆ ಹಾಜರಿದ್ದರು.**

# ಉಚಿತ ಆರೋಗ್ಯ ತಪಾಸಣೆ ಶಿಬಿರಗಳು ಯುವಕರಿಗೆ ಪ್ರೇರಣೆ

### ವಿದ್ಯಾರ್ಥಿಗಳಲ್ಲಿ ಜಾಗೃತಿ ಮೂಡಿಸಿ, ದುಶ್ಚಟಗಳಿಗೆ ಬಲಿಯಾಗದಂತೆ ತಡೆಯುವ ಉದ್ದೇಶ

• ಪ್ರಜೋದಯ ವರದಿ

**ಹಾಸನ:** ರೆಡ್‌ಕ್ರಾಸ್ ಸಂಸ್ಥೆ ಹಾಸನ ಜಿಲ್ಲೆಯಲ್ಲಿ ನಿರಂತರವಾಗಿ ಸಮಾಜಮುಖಿ ಕಾರ್ಯಕ್ರಮಗಳನ್ನು ಆಯೋಜಿಸುತ್ತಿರುವುದು ಶ್ಲಾಘನೀಯವಾಗಿದ್ದು, ವಿಶೇಷವಾಗಿ ಕಾಲೇಜು ವಿದ್ಯಾರ್ಥಿಗಳಿಗಾಗಿ ರಕ್ತದಾನ ಶಿಬಿರಗಳು, ಉಚಿತ ಆರೋಗ್ಯ ತಪಾಸಣೆ ಶಿಬಿರಗಳು ಹಾಗೂ ಪ್ರಥಮ ಚಿಕಿತ್ಸೆ ತರಬೇತಿ ಕಾರ್ಯಕ್ರಮಗಳನ್ನು ನಿಸ್ವಾರ್ಥ ಭಾವದಿಂದ ನಡೆಸುತ್ತಿರುವುದು ಯುವಜನತೆಗೆ ಪ್ರೇರಣಾದಾಯಕವಾಗಿದೆ ಎಂದು ಹಾಸನ ವಿಶ್ವವಿದ್ಯಾಲಯದ ಕುಲ ಸಚಿವ ಬಿ.ಎ. ಜಗದೀಶ್ ಅಭಿಪ್ರಾಯಪಟ್ಟರು.

ಭಾರತೀಯ ರೆಡ್ ಕ್ರಾಸ್ ಸಂಸ್ಥೆ, ಜಿಲ್ಲಾ ಶಾಖೆ ಹಾಸನ ಹಾಗೂ ಹಾಸನ ವಿಶ್ವವಿದ್ಯಾಲಯ ಹೇಮಗಂಗೋತ್ರಿ ಇವರ ಸಂಯುಕ್ತಾಶ್ರಯದಲ್ಲಿ ಹಮ್ಮಿಕೊಳ್ಳಲಾಗಿದ್ದ ಹಾಸನ ಜಿಲ್ಲೆಯ ಪದವಿ ಕಾಲೇಜುಗಳ ಯುವ ರೆಡ್ ಕ್ರಾಸ್ ಘಟಕದ ಸಂಯೋಜಕರ ಸಭೆ ಉದ್ಘಾಟಿಸಿ ಮಾತನಾಡಿದರು.

ರೆಡ್ ಕ್ರಾಸ್ ಸಂಸ್ಥೆ ಕರ್ನಾಟಕ ರಾಜ್ಯ ಶಾಖೆಯ ಪ್ರಧಾನ ಕಾರ್ಯದರ್ಶಿ ಉಮಾಕಾಂತ್ ಹಾಗೂ ರಾಜ್ಯ ಯುವ ರೆಡ್‌ಕ್ರಾಸ್ ಘಟಕದ ಸಂಯೋಜಕ ಆನಂದ್ ಡಿ.ಜಿ ಅವರು, ಶಿಕ್ಷಣ ಇಲಾಖೆಯ ನಿರ್ದೇಶನಾಲಯದ ಸೂಚನೆಯಂತೆ ಕರ್ನಾಟಕದ ಎಲ್ಲಾ ಕಾಲೇಜುಗಳ ಯುವ ರೆಡ್ ಕ್ರಾಸ್ ಘಟಕದ ಸಂಯೋಜಕರ ಸಭೆಯನ್ನು ಆನ್‌ಲೈನ್ ಮೂಲಕ ನಡೆಸಿ, ಯುವ ರೆಡ್ ಕ್ರಾಸ್ ಘಟಕ ನೋಂದಣಿ, ಕಾರ್ಯಕ್ರಮ ವಿವರಗಳು, ಹಣಕಾಸು ನಿರ್ವಹಣೆ ಸೇರಿದಂತೆ ಅಗತ್ಯ ಮಾಹಿತಿಗಳನ್ನು ಹಂಚಿಕೊಂಡರು.




ರೆಡ್ ಕ್ರಾಸ್ ಸಂಸ್ಥೆಯ ಸಭಾಪತಿ ಹೆಮ್ಮಿಗೆ ಮೋಹನ್ ಅವರು ಮಾತನಾಡಿ, ಹಾಸನ ವಿಶ್ವವಿದ್ಯಾ ಲಯದ ಸಹಯೋಗದೊಂದಿಗೆ ಜಿಲ್ಲಾದ್ಯಂತ ಮಾನವೀಯ ಮೌಲ್ಯಗಳನ್ನು ಬೆಳೆಸುವ ಅನೇಕ ಕಾರ್ಯ ಕ್ರಮಗಳನ್ನು ಸಂಸ್ಥೆ ನಡೆಸುತ್ತಿದೆ ಎಂದು ತಿಳಿಸಿದರು. ಈ ಸಭೆಯ ಮುಖ್ಯ ಉದ್ದೇಶ ವೆಂದರೆ ಕಾಲೇಜು ಸಂಯೋಜಕರ ಮುಖಾಂತರ ವಿದ್ಯಾರ್ಥಿಗಳಲ್ಲಿ ಜಾಗೃತಿ ಮೂಡಿಸಿ, ದುಶ್ಚಟಗಳಿಗೆ ಬಲಿಯಾಗದಂತೆ ತಡೆಯುವುದು ಎಂದು ಹೇಳಿದರು. ಯುವ ರೆಡ್ ಕ್ರಾಸ್ ಘಟಕದ ಅಡಿಯಲ್ಲಿ ಪ್ರತಿ ಕಾಲೇಜಿನಲ್ಲಿ ಸಮಿತಿಗಳನ್ನು ರಚಿಸಿ, ವಿದ್ಯಾರ್ಥಿಗಳಲ್ಲಿ ಶಿಸ್ತು, ನಾಯಕತ್ವ, ಸೇವಾ ಮನೋಭಾವ ಮತ್ತು ಸಾಮಾಜಿಕ ಜವಾಬ್ದಾರಿತನ ವನ್ನು ಬೆಳೆಸಲು ಮುಂದಾಗಬೇಕು ಎಂದು ಕರೆ ಅವರು ನೀಡಿದರು.

ಹಾಸನ ಜಿಲ್ಲೆಯ ಪದವಿ ಕಾಲೇಜುಗಳ ಸಂಯೋಜಕರು ಕಾರ್ಯಕ್ರಮದಲ್ಲಿ ಭಾಗಿಯಾಗಿ ಯುವ ರೆಡ್ ಕ್ರಾಸ್ ಘಟಕದ ಚಟುವಟಿಕೆಗಳನ್ನು ಇನ್ನಷ್ಟು ಪರಿಣಾಮಕಾರಿಯಾಗಿ ಮತ್ತು ವ್ಯವಸ್ಥಿತವಾಗಿ ಆಯೋಜಿಸುವ ಕುರಿತು ಮಹತ್ವದ ಸಲಹೆಗಳು ಹಾಗೂ ಅಭಿಪ್ರಾಯಗಳನ್ನು ವಿನಿಮಯ ಮಾಡಿಕೊಂಡರು.

ಶಬ್ಬೀರ್ ಅಹ್ಮದ್, ರೆಡ್‌ಕ್ರಾಸ್ ಸಂಸ್ಥೆಯ ಜಯೇಂದ್ರಕುಮಾರ್, ಸುಬ್ಬಸ್ವಾಮಿ, ಉದಯ್‌ಕುಮಾರ್, ಗಿರೀಶ್, ಗಿರಿಗೌಡ, ಭೀಮ್‌ರಾಜ್, ಕೆ.ಟಿ.ಜಯಶ್ರೀ, ಮಧು ಸೇರಿದಂತೆ ಅನೇಕ ಪದಾಧಿಕಾರಿಗಳು ಹಾಗೂ ಸಂಯೋಜಕರು ಸೇರಿದಂತೆ ಇನ್ನಿತರರು ಉಪಸ್ಥಿತರಿದ್ದರು.

## ಚರ್ಚ್ ಆವರಣಕ್ಕೆ ಇಂಟರ್ ಲಾಕ್ ಅಳವಡಿಕೆಗೆ ಪೂಜೆ

• ಪ್ರಜೋದಯ ವರದಿ

**ಚನ್ನರಾಯಪಟ್ಟಣ:** ಕ್ರಿಶ್ಚಿಯನ್ ಸಮುದಾಯದವರು ಹಲವು ಬಾರಿ ತಮ್ಮಲ್ಲಿ ಮನವಿ ಮಾಡಿದ ಮೇರೆಗೆ ಪುರಸಭೆ ನಿಧಿಯಡಿ ಮೈಸೂರು ರಸ್ತೆಯಲ್ಲಿರುವ ಚರ್ಚ್‌ನ ಆವರಣಕ್ಕೆ 13 ಲಕ್ಷ ರೂ. ವೆಚ್ಚದಲ್ಲಿ ಇಂಟರ್ ಲಾಕ್ ಅಳವಡಿಸಲಾಗುತ್ತಿದೆ ಎಂದು ಶಾಸಕ ಸಿ.ಎನ್.ಬಾಲಕೃಷ್ಣ ಹೇಳಿದರು.

ಪಟ್ಟಣದ ಮೈಸೂರು ರಸ್ತೆಯಲ್ಲಿನ ಸಿಜಿಎಂಆರ್ ಕಲ್ಯಾಣ ಮಂಟಪದ ಎದುರಿರುವ ಕ್ರಿಶ್ಚಿಯನ್ ಸಮುದಾಯದ ಪ್ರಾರ್ಥನ ಮಂದಿರದ ಆವರಣಕ್ಕೆ ಇಂಟರ್ ಲಾಕ್ ಅಳವಡಿಸುವ ಕಾಮಗಾರಿಗೆ ಬುಧವಾರ ಗುದ್ದಲಿಪೂಜೆ ನೆರವೇರಿಸಿ ಮಾತನಾಡಿದ ಅವರು, ಮಳೆಗಾಲದ ವೇಳೆ ಚರ್ಚ್ ಆವರಣ ಕೆಸರುಮಯವಾಗುತ್ತಿದ್ದರಿಂದ ಪ್ರಾರ್ಥನೆಗೆಂದು ಆಗಮಿಸುವವರಿಗೆ ತೊಂದರೆಯಾಗುತ್ತಿದ್ದನ್ನು ಮನಗಂಡು ಸಮುದಾಯದ ಮುಖಂಡರು ತಮಗೆ ಹಲವು ಬಾರಿ ಮನವಿ ಮಾಡಿದ ಮೇರೆಗೆ 13.5 ಲಕ್ಷ ರೂ. ವೆಚ್ಚದಲ್ಲಿ ಇಂಟರ್ ಲಾಕ್ ಅಳವಡಿಸಲಾಗುತ್ತಿದೆ. ಗುಡ್‌ಫ್ರೈಡೆ ಹಬ್ಬದೊಳಗೆ ಕಾಮಗಾರಿ ಪೂರ್ಣಗೊಳಿಸುವಂತೆ ಗುತ್ತಿಗೆದಾರರಿಗೆ ತಿಳಿಸಲಾಗಿದೆ.



ಚರ್ಚ್ ಪಕ್ಕದಲ್ಲಿ ಹಾದು ಹೋಗಿರುವ ಚರಂಡಿ ನಿರ್ಮಾಣದ ವೇಳೆ ಹೇಮಾವತಿ ಇಲಾಖೆಯಿಂದ ಚರ್ಚ್‌ಗೆ ಸಹಾಯಧನ ಒದಗಿಸಲಾಗಿದೆ. ಚರ್ಚ್‌ನ ಮುಂಭಾಗ ಇರುವ ಚರಂಡಿಗೆ ಲೋಕಪಯೋಗಿ ಇಲಾಖೆಯಡಿ ಸ್ಲಾಬ್ ಅಳವಡಿಸಿ ಪ್ರಾರ್ಥನೆಗೆಂದು ಆಗಮಿಸುವವರ ದ್ವಿಚಕ್ರ ವಾಹನ ನಿಲುಗಡೆಗೆ ಅವಕಾಶವನ್ನು ಎರಡನೇ ಹಂತದಲ್ಲಿ ಕೈಗೆತ್ತಿಕೊಳ್ಳಲಾಗುವುದು ಹೇಳಿದರು.

ಚರ್ಚ್‌ನ ಫಾದರ್ ಜೆರೋಮ್ ಮಾಚಾಡೋ, ಪುರಸಭಾ ಮಾಜಿ ಸದಸ್ಯ ಸಿ.ವೈ.ಸತ್ಯನಾರಾಯಣ್, ಅಗಸ್ಟಿನ್, ರಾಜು ಅಂದ್ರೆಯಾಸ್, ಡೇವಿಡ್ ರಾಜು, ಜೋಸ್ಪೀನ್ ಇನ್ನಿತರರು ಹಾಜರಿದ್ದರು.

# ದೌರ್ಜನ್ಯ ಖಂಡಿಸಿ ಮಹಿಳೆಯರ ಮೌನ ಮೆರವಣಿಗೆ

### ಸಮಾನತೆಯೆಡೆಗೆ ನಮ್ಮ ನಡಿಗೆ – ದೌರ್ಜನ್ಯವನ್ನೆಂದೂ ಸಹಿಸುವುದಿಲ್ಲ, ನ್ಯಾಯ ದಕ್ಕದೆ ಬಿಡುವುದೇ ಇಲ್ಲ

• ಪ್ರಜೋದಯ ವರದಿ

**ಬೇಲೂರು:** ಅಂತಾರಾಷ್ಟ್ರೀಯ ಮಹಿಳಾ ದಿನಾಚರಣೆ ಅಂಗವಾಗಿ ಕರ್ನಾಟಕ ರಾಜ್ಯ ಮಹಿಳಾ ದೌರ್ಜನ್ಯ ವಿರೋಧಿ ಒಕ್ಕೂಟ ಹಾಸನ ಜಿಲ್ಲಾ ಘಟಕದ ವತಿಯಿಂದ ಆಯೋಜಿಸಲಾದ ಕಪ್ಪು ಉಡುಗೆಯ ಮಹಿಳೆಯರ ಜಾಥಾ ಪಟ್ಟಣದಲ್ಲಿ ಶಾಂತಿಯುತವಾಗಿ ನಡೆಯಿತು.

''ಸಮಾನತೆಯೆಡೆಗೆ ನಮ್ಮ ನಡಿಗೆ – ದೌರ್ಜನ್ಯವನ್ನೆಂದೂ ಸಹಿಸುವುದಿಲ್ಲ, ನ್ಯಾಯ ದಕ್ಕದೆ ಬಿಡುವುದೇ ಇಲ್ಲ'' ಎಂಬ ಘೋಷವಾಕ್ಯದೊಂದಿಗೆ ಮಹಿಳೆಯರು ವೀರಶೈವ ಸಮುದಾಯ ಭವನದಿಂದ ಬಸವೇಶ್ವರ ವೃತ್ತದವರೆಗೆ ಮೆರವಣಿಗೆ ನಡೆಸಿದರು. ಕಪ್ಪು ಉಡುಗೆ ಧರಿಸಿ, ಕೈಯಲ್ಲಿ ಮೊಂಬತ್ತಿ ಹಚ್ಚಿಕೊಂಡು ಶಾಂತಿಯುತವಾಗಿ ನಡೆದ ಮೆರವಣಿಗೆ ಸಾರ್ವಜನಿಕರ ಗಮನ ಸೆಳೆಯಿತು.

ಕರ್ನಾಟಕ ರಾಜ್ಯ ಮಹಿಳಾ ದೌರ್ಜನ್ಯ ವಿರೋಧಿ ಒಕ್ಕೂಟದ ಗೌರವ ಅಧ್ಯಕ್ಷರು ಹಾಗೂ ಮಲ್ನಾಡ್ ಆಸ್ಪತ್ರೆಯ ಪ್ರಸೂತಿ ತಜ್ಞರಾದ ಡಾ. ಸಾವಿತ್ರಿ ಅವರು ಮಾತನಾಡಿ, ಮಹಿಳೆಯರ ಮೇಲಿನ ದೌರ್ಜನ್ಯವನ್ನು ತೀವ್ರವಾಗಿ ಖಂಡಿಸಿದರು. ಜಾಗೃತಿ ಮೂಡಿಸಿ ಸಮಾನ ಹಕ್ಕುಗಳಿಗಾಗಿ ಆಗ್ರಹಿಸುವ ಉದ್ದೇಶದಿಂದ ಇದೇ ತಿಂಗಳ 7 ಮತ್ತು 8 ರಂದು ಹಾಸನದಲ್ಲಿ ಬೃಹತ್ ಸಮಾವೇಶವನ್ನು ಆಯೋಜಿಸಲಾಗಿದೆ ಎಂದು ತಿಳಿಸಿದರಲ್ಲದೆ, ಕಳೆದ 13 ವರ್ಷಗಳಿಂದ ರಾಜ್ಯದ ವಿವಿಧ ಜಿಲ್ಲೆಗಳಲ್ಲಿ ಸಮಾವೇಶಗಳನ್ನು ನಡೆಸುತ್ತಿರುವ ಒಕ್ಕೂಟವು ಮಹಿಳಾ ದಿನಾಚರಣೆಯನ್ನು ಮಹಿಳಾ ಚೈತನ್ಯ ದಿನವಾಗಿ ಆಚರಿಸುತ್ತಿದ್ದು, ಈ ಬಾರಿ 14ನೇ ಜಿಲ್ಲೆಯಾಗಿ ಹಾಸನವನ್ನು ಆಯ್ಕೆ ಮಾಡಲಾಗಿದೆ ಎಂದರು.



ಮಾರ್ಚ್ 7ರಂದು ಬೆಳಿಗ್ಗೆ ಮಹಿಳೆಯರ ಹಕ್ಕುಗಳಿಗಾಗಿ ಬೃಹತ್ ಜಾಥಾ ನಡೆಯಲಿದ್ದು, ಬಳಿಕ ಪ್ರಸಿದ್ಧ ಹೋರಾಟಗಾರ್ತಿ ತೀಸ್ತಾ ಸೆಟಲ್ವಾಡ್ ಅವರು ವಿಚಾರ ಮಂಡನೆ ನಡೆಸಲಿದ್ದಾರೆ. ಅದೇ ದಿನ ಸಂಜೆ ಕಪ್ಪು ಉಡುಪಿನಲ್ಲಿ ಮಹಿಳೆಯರು ಎಂಬ ವಿನೂತನ ಮೌನ ಪ್ರತಿಭಟನೆ ಹಮ್ಮಿಕೊಳ್ಳಲಾಗಿದೆ. ಯಾವುದೇ ಘೋಷಣೆಗಳಿಲ್ಲದೆ ಮೌನದ ಮೂಲಕ ದೌರ್ಜನ್ಯ ವಿರೋಧಿ ಸಂದೇಶವನ್ನು ಸಮಾಜಕ್ಕೆ ರವಾನಿಸುವುದು ಇದರ ಉದ್ದೇಶವಾಗಿದೆ ಎಂದು ಹೇಳಿದರು.

ಮಾ.8ರಂದು ರಾಜ್ಯ ಹಾಗೂ ಹೊರರಾಜ್ಯದ ಸಂಪನ್ಮೂಲ ವ್ಯಕ್ತಿಗಳಿಂದ ವಿವಿಧ ಸಾಮಾಜಿಕ ವಿಷಯಗಳ ಕುರಿತು ವಿಚಾರ ಸಂಕಿರಣಗಳು ನಡೆಯಲಿವೆ ಎಂದು ವಿವರಿಸಿದರು. ಮಹಿಳೆಯರ ಸುರಕ್ಷತೆಗಾಗಿ ಸರ್ಕಾರವು ಕಠಿಣ ಭದ್ರತಾ ಕ್ರಮಗಳನ್ನು ಕೈಗೊಳ್ಳಬೇಕು ಹಾಗೂ ಸಮಾಜದಲ್ಲಿ ಸಮಾನತೆ ಮತ್ತು ಗೌರವ ಕಾಪಾಡಬೇಕು ಎಂದು ಆಗ್ರಹಿಸಿದರು.

ಒಕ್ಕೂಟದ ಖಜಾಂಚಿ ಭಾನುಮತಿ ಅವರು ಮಾತನಾಡಿ, ಬೇಲೂರು ತಾಲೂಕಿನಲ್ಲಿ ಮಹಿಳೆ ಕಪ್ಪು ಉಡುಪಿನಲ್ಲಿ ಎಂಬ ಮೌನ ಪ್ರತಿಭಟನೆ ನಡೆಸಲಾಗಿದ್ದು, ಮಹಿಳೆಯರು ಮೌನದ ಮೂಲಕ ತಮ್ಮ ಆಕ್ರೋಶ ಮತ್ತು ನಿಲುವನ್ನು ವ್ಯಕ್ತಪಡಿಸಿದ್ದಾರೆ ಎಂದು ತಿಳಿಸಿದರು.

ಪುರಸಭೆ ಮಾಜಿ ಅಧ್ಯಕ್ಷೆ ಹಾಗೂ ಹಾಲಿ ಸದಸ್ಯೆ ತೀರ್ಥಕುಮಾರಿ, ಸೌಭಾಗ್ಯ ಅಂತೋಣಿ, ಸಾವಿತ್ರಿ, ಜಿ.ಟಿ. ಇಂದಿರಾ, ವಿಂಪು ಸಂತೋಷ್, ಚಂದ್ರಕಲಾ ಸೇರಿದಂತೆ ನೂರಾರು ಮಹಿಳೆಯರು ಭಾಗವಹಿಸಿದ್ದರು.

### ಕೃಷಿ ಸಮೃದ್ಧಿಯಾಗಲಿ । ಜನರ ಸುರಕ್ಷಿತ ಬದುಕಿಗೆ ಹಾಗೂ ನಿರಂತರ ವಿದ್ಯುತ್ ಸರಬರಾಜಿಗೆ ವಿಶೇಷ ಪ್ರಾರ್ಥನೆ

# ಚನ್ನಕೇಶವ ಸ್ವಾಮಿಗೆ ಸೆಸ್ಕಾಂ ವತಿಯಿಂದ ವಿಶೇಷ ಅಭಿಷೇಕ

• ಪ್ರಜೋದಯ ವರದಿ

**ಬೇಲೂರು:** ತಾಲ್ಲೂಕಿನ ಜನತೆಗೆ ವರ್ಷಪೂರ್ತಿ ನಿರಂತರ, ಗುಣಮಟ್ಟದ ಹಾಗೂ ಸುರಕ್ಷಿತ ವಿದ್ಯುತ್ ಸರಬರಾಜು ದೊರೆಯಲಿ ಎಂಬ ಆಶಯದಿಂದ ಚಾಮುಂಡೇಶ್ವರಿ ವಿದ್ಯುತ್ ಸರಬರಾಜು ನಿಯಮಿತ (ಸೆಸ್ಕಾಂ) ಬೇಲೂರು ಉಪವಿಭಾಗದ ವತಿಯಿಂದ ಶ್ರೀ ಚನ್ನಕೇಶವ ಸ್ವಾಮಿ ದೇವಸ್ಥಾನದಲ್ಲಿ ವಿಶೇಷ ಅಭಿಷೇಕ ಹಾಗೂ ಪೂಜೆ ಕಾರ್ಯಕ್ರಮವನ್ನು ಶ್ರದ್ಧಾ- ಭಕ್ತಿಯಿಂದ ನೆರವೇರಿಸಲಾಯಿತು.

ಪ್ರತಿ ವರ್ಷದಂತೆ ಈ ವರ್ಷವೂ ಇಲಾಖೆಯ ಪರವಾಗಿ ಆಯೋಜಿಸಲಾಗಿದ್ದ ಧಾರ್ಮಿಕ ಕಾರ್ಯಕ್ರಮದಲ್ಲಿ ಅಧಿಕಾರಿಗಳು ಮತ್ತು ಸಿಬ್ಬಂದಿಗಳು ಭಾಗವಹಿಸಿ, ವಿದ್ಯುತ್ ಇಲಾಖೆಯ ಮೇಲಿನ ಚನ್ನಕೇಶವ ಸ್ವಾಮಿಯ ಕೃಪೆ ಸದಾ ಇರಲಿ ಎಂದು ಪ್ರಾರ್ಥಿಸಿದರು. ವಿಶೇಷವಾಗಿ ಮಳೆ ಸಮರ್ಪಕವಾಗಿ ಸುರಿದು ಕೃಷಿ ಸಮೃದ್ಧಿಯಾಗಲಿ, ಪ್ರಕೃತಿ ವಿಕೋಪಗಳು ಅಥವಾ ವಿದ್ಯುತ್ ಅವಘಡಗಳು ಸಂಭವಿಸದಂತೆ ತಾಲೂಕಿನ ಜನತೆ ಸುರಕ್ಷಿತವಾಗಿರಲಿ ಎಂಬ ಆಶಯ ವ್ಯಕ್ತಪಡಿಸಲಾಯಿತು.

ಸಹಾಯಕ ಕಾರ್ಯಪಾಲಕ ಇಂಜಿನಿಯರ್ ಬಸವರಾಜು ಅವರು ಮಾತನಾಡಿ, ''ನಾನು ಕಳೆದ ಒಂದು ಮುಕ್ಕಾಲು ವರ್ಷಗಳಿಂದ ಎ.ಇ.ಇ. ಆಗಿ ಸೇವೆ ಸಲ್ಲಿಸುತ್ತಿದ್ದೇನೆ. ಇಲಾಖೆಯ ಪರವಾಗಿ ಪ್ರತಿ ವರ್ಷ ಚನ್ನಕೇಶವ ಸ್ವಾಮಿಗೆ ಅಭಿಷೇಕ ಮಾಡುವುದು ನಮ್ಮ ಪರಂಪರೆಯ ಭಾಗವಾಗಿದೆ. ವಿದ್ಯುತ್ ಅವಘಡಗಳು ಕಡಿಮೆಯಾಗಲಿ, ಜನರ ಜೀವ-ಸಂಪತ್ತು ರಕ್ಷಿತವಾಗಿರಲಿ ಹಾಗೂ ನಮ್ಮ ಇಲಾಖೆಯ ಎಲ್ಲಾ ಕೆಲಸಗಳು ಸುಗಮವಾಗಿ ಸಾಗಲಿ ಎಂಬ ಉದ್ದೇಶದಿಂದ ಈ ಪೂಜೆ ನಡೆಸಲಾಗುತ್ತಿದೆ. ಮಳೆಯೂ ಸಮರ್ಪಕವಾಗಿ ಬಂದು ತಾಲೂಕಿನ ಅಭಿವೃದ್ಧಿಗೆ ದಾರಿ ಮಾಡಿಕೊಡಲಿ ಎಂಬ ಪ್ರಾರ್ಥನೆ ಸಲ್ಲಿಸಿದ್ದೇವೆ ಎಂದು ತಿಳಿಸಿದರು.



ಕಾರ್ಯಪಾಲಕ ಇಂಜಿನಿಯರ್ ವೆಂಕಟೇಶ್ ಅವರು ಮಾತನಾಡಿ, ಬೇಲೂರು ಉಪವಿಭಾಗದಿಂದ ಈ ಕಾರ್ಯಕ್ರಮಕ್ಕೆ ಅಗತ್ಯವಿರುವ ಎಲ್ಲಾ ವ್ಯವಸ್ಥೆಗಳನ್ನು ಶಿಸ್ತಿನಿಂದ ಮಾಡಲಾಗಿದೆ. ಜನತೆಗೆ ನಿರಂತರ ಮತ್ತು ಸುರಕ್ಷಿತ ವಿದ್ಯುತ್ ಸರಬರಾಜು ನೀಡುವುದು ನಮ್ಮ ಪ್ರಮುಖ ಹೊಣೆಗಾರಿಕೆ. ದೇವರ ಕೃಪೆಯಿಂದ ನಮ್ಮ ಸಿಬ್ಬಂದಿಗಳು ಆರೋಗ್ಯದಿಂದ ಸೇವೆ ಸಲ್ಲಿಸಲಿ, ಯಾವುದೇ ಅನಾಹುತಗಳು ಸಂಭವಿಸದಂತೆ ಇಲಾಖೆ ಕಾರ್ಯ ನಿರ್ವಹಿಸಲಿ ಎಂಬ ಆಶಯದೊಂದಿಗೆ ಪೂಜೆ ನೆರವೇರಿಸಲಾಗಿದೆ ಎಂದು ಅವರು ಹೇಳಿದರು.

ಅಭಿಷೇಕದ ನಂತರ ವಿಶೇಷ ಅಲಂಕಾರ ಮತ್ತು ಮಹಾಮಂಗಳಾರತಿ ನಡೆಯಿತು. ಪೂಜಾ ಕಾರ್ಯಕ್ರಮದಲ್ಲಿ ಇಲಾಖೆಯ ಅಧಿಕಾರಿಗಳು ಮತ್ತು ಸಿಬ್ಬಂದಿಗಳು ಒಗ್ಗಟ್ಟಿನಿಂದ ಭಾಗವಹಿಸಿದ್ದು, ಸೇವಾಭಾವನೆಯೊಂದಿಗೆ ಕಾರ್ಯ ನಿರ್ವಹಿಸುವ ಸಂಕಲ್ಪವನ್ನು ಅವರು ಮತ್ತೊಮ್ಮೆ ವ್ಯಕ್ತಪಡಿಸಿದರು.

ಈ ಸಂದರ್ಭದಲ್ಲಿ ಡಿವಿಜನ್ ಅಧ್ಯಕ್ಷ ಜಗದೀಶ್, ಕೇಂದ್ರ ಸಮಿತಿ ಸದಸ್ಯ ನವಾಜ್ ಖಾನ್, ಕಿರಿಯ ಇಂಜಿನಿಯರ್ ರೇವಣ್ಣ, ರಾಘವೇಂದ್ರ, ಪುಟ್ಟರಾಜು, ಮಂಜುನಾಥ್ ಸೇರಿದಂತೆ ವಿದ್ಯುತ್ ಇಲಾಖೆಯ ಸಿಬ್ಬಂದಿಗಳು ಹಾಜರಿದ್ದರು. ಪೂಜೆಯ ಬಳಿಕ ಪ್ರಸಾದ ವಿತರಣೆ ನಡೆಯಿತು.

ಒಟ್ಟಾರೆ ಜನರ ಸುರಕ್ಷತೆ, ಉತ್ತಮ ಮಳೆ, ಕೃಷಿ ಸಮೃದ್ಧಿ ಹಾಗೂ ವಿದ್ಯುತ್ ಸೇವೆಯಲ್ಲಿ ಮತ್ತಷ್ಟು ಸುಧಾರಣೆ ಎಂಬ ಧ್ಯೇಯದೊಂದಿಗೆ ಈ ಧಾರ್ಮಿಕ ಕಾರ್ಯಕ್ರಮವು ಅರ್ಥಪೂರ್ಣವಾಗಿ ನೆರವೇರಿತು.

## ಇಂದು ತಾಲ್ಲೂಕು ಮಟ್ಟದ ಕೆ.ಡಿ.ಪಿ. ಸಭೆ

**ಹಾಸನ:** ಬೇಲೂರು ವಿಧಾನಸಭಾ ಶಾಸಕ ಹೆಚ್.ಕೆ ಸುರೇಶ್ ಅವರ ಅಧ್ಯಕ್ಷತೆಯಲ್ಲಿ ಕರ್ನಾಟಕ ಅಭಿವೃದ್ಧಿ ಕಾರ್ಯಕ್ರಮಗಳ (ಕೆ.ಡಿ.ಪಿ) ತೃತೀಯ ತ್ರೈಮಾಸಿಕ ಸಭೆಯನ್ನು ಮಾ.05 ರಂದು ಬೆಳಿಗ್ಗೆ 11 ಗಂಟೆಗೆ ಬೇಲೂರು ತಾಲ್ಲೂಕು ಪಂಚಾಯಿತಿಯಲ್ಲಿ ಹಮ್ಮಿಕೊಳ್ಳಲಾಗಿದೆ ಎಂದು ಪ್ರಕಟಣೆ ತಿಳಿಸಿದೆ.

**CHANGE OF NAME**

I, Manu M.B. S/o Byregowda, aged about 40 years, R/o # 180, 12th Cross, Nagasamudra Road, B.G. Tilak Badavane, Channarayapatna Town & Taluk, Hassan Distict, Karnataka State, do hereby solemnly affirm and state on oath as follows:

I state that my wife name is Pavithra B. In my wife Aadhar Card No: 789734384605 mentioned as Pavithara B and in my Army documents name is mentioned as Pavithra Manu.

I confirm that in my wife Aadhar card name is correct and it belongs to me only.

I am swearing this affidavit to produce before the concerned authority.

The above stated facts are true to the best of my knowledge.

**Place: Channarayapatna** **Deponent**
**Date: 04-03-2026**

# ಗ್ಯಾರಂಟಿ ಯೋಜನೆಗಳಿಂದ ಜನರ ಬದುಕು ಸುಧಾರಣೆ

## ಸಂಸದ ಶ್ರೇಯಸ್ ಪಟೇಲ್ । ಫಲಾನುಭವಿಗಳ ಸಮಾವೇಶ

• ಪ್ರಜೋದಯ ವರದಿ

**ಹೊಳೆನರಸೀಪುರ:** ಪಂಚ ಗ್ಯಾರಂಟಿ ಯೋಜನೆಗಳ ಮೂಲಕ ರಾಜ್ಯ ಸರ್ಕಾರ ರಾಜ್ಯದ ಪ್ರತಿ ಕುಟುಂಬಕ್ಕೂ ಸ್ವಾವಲಂಬಿ ಬದುಕು ಕಟ್ಟಿಕೊಳ್ಳಲು ಅನುಕೂಲ ಮಾಡಿ ಕೊಟ್ಟಿದೆ ಎಂದು ಸಂಸದ ಶ್ರೇಯಸ್ ಪಟೇಲ್ ಅವರು ಹೇಳಿದರು.

ಪಟ್ಟಣದ ಗಣಪತಿ ಪೆಂಡಾಲ್‌ನಲ್ಲಿ ತಾಲ್ಲೂಕು ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರ ಸಮಿತಿಯಿಂದ ಆಯೋಜಿಸಿದ್ದ ಗ್ಯಾರಂಟಿ ಯೋಜನೆಗಳ ಫಲಾನುಭವಿಗಳ ಸಾರ್ಥಕ ಸಮಾವೇಶ ಹಾಗು ಪ್ರಗತಿ ಪರಿಶೀಲನಾ ಸಭೆ ಉದ್ಘಾಟಿಸಿ ಮಾತನಾಡಿದ ಅವರು, ನಮ್ಮ ಸರ್ಕಾರದ ಐದು ಗ್ಯಾರಂಟಿ ಯೋಜನೆಗಳಾದ ಸ್ತ್ರೀ ಶಕ್ತಿ, ಗೃಹಜ್ಯೋತಿ, ಗೃಹಲಕ್ಷ್ಮಿ, ಅನ್ನಭಾಗ್ಯ ಮತ್ತು ಯುವನಿಧಿ ಯೋಜನೆ ಅನೇಕರಿಗೆ ನೆರವಾಗಿದೆ ಎಂದರು.

ಪ್ರತಿ ಕುಟುಂಬಕ್ಕೆ ಸರ್ಕಾರದಿಂದ ಕನಿಷ್ಟ 5 ರಿಂದ 8 ಸಾವಿರ ರೂ. ತಲುಪುತ್ತಿದೆ. ಅದರಿಂದ ದೈನಂದಿನ ಆರ್ಥಿಕ ಚಟುವಟಿಕೆಗಳಿಗೆ ಸಮಸ್ಯೆಯಾಗುತ್ತಿಲ್ಲ. ಗೃಹ ಲಕ್ಷ್ಮಿ ಯೋಜನೆಯಿಂದ ಅನೇಕ ಮಹಿಳೆಯರು ಸ್ವಉದ್ಯೋಗ ಮಾಡಿಕೊಂಡಿದ್ದಾರೆಂದರು.

ಗ್ಯಾರಂಟಿ ಯೋಜನೆಗಳ ಮೇಲ್ವಿಚಾರಣೆಗಾಗಿ ಸರ್ಕಾರ ಅನುಷ್ಠಾನ ಸಮಿತಿಯನ್ನೂ ರಚಿಸಿದೆ. ಫಲಾನುಭವಿಗಳು ಏನೇ ಸಮಸ್ಯೆಯಿದ್ದರೂ ಸಂಬಂಧಪಟ್ಟ ಅಧಿಕಾರಿ ಹಾಗು ಸಮಿತಿ ಪದಾಧಿಕಾರಿಗಳನ್ನು ಸಂಪರ್ಕಿಸಬಹುದು. ತಾಲ್ಲೂಕು ಪಂಚಾಯಿತಿ ಕಚೇರಿಯಲ್ಲಿ ಸಹಾಯ ವಾಣಿ ತೆರೆಯಲಾಗಿದೆ. ಅಲ್ಲಿ ದೂರು ದಾಖಲಿಸುವ ಮೂಲಕ ಸಮಸ್ಯೆಗೆ ಪರಿಹಾರ ಕಂಡುಕೊಳ್ಳಬಹುದು. ಅನ್ನಭಾಗ್ಯ ಯೋಜನೆಯಲ್ಲಿ ಇತ್ತೀಚಿನ ದಿನಗಳಲ್ಲಿ ಮೊಬೈಲ್ ಹಣ ವರ್ಗಾ ವಣೆ ಸಂಬಂಧ ಬಿಪಿಎಲ್ ಕಾರ್ಡ್‌ಗಳು ರದ್ದಾಗಿದ್ದು, ಅದರ ಬಗ್ಗೆ ಅಹಾರ ನಿರೀಕ್ಷಕರಿಗೆ ಅಗತ್ಯ ದಾಖಲೆ ನೀಡಿ, ಸಮಸ್ಯೆ ನಿವಾರಣೆ ಮಾಡಿಕೊಳ್ಳಬಹುದು ಎಂದರು.



ತಾಲ್ಲೂಕು ಪಂಚಾಯಿತಿ ಸೇರಿ ವಿವಿಧ ಇಲಾಖೆಗಳ ಅಧಿಕಾರಿಗಳು ನಮ್ಮ ಸರ್ಕಾರದ ಗ್ಯಾರಂಟಿ ಯೋಜನೆಗಳನ್ನು ಜನರಿಗೆ ತಲುಪಿಸುವಲ್ಲಿ ಉತ್ತಮ ಸೇವೆ ಸಲ್ಲಿಸುತ್ತಿದ್ದಾರೆಂದು ಮೆಚ್ಚುಗೆ ವ್ಯಕ್ತಪಡಿಸಿದರು.

ಚುನಾವಣೆ ಪೂರ್ವದಲ್ಲಿ ಕಾಂಗ್ರೆಸ್ ನೀಡಿದ ಭರವಸೆಯನ್ನು ಚಾಚೂ ತಪ್ಪದೇ ಈಡೇರಿ ಸುತ್ತಿದೆ. ಆರಂಭದಲ್ಲಿ ವಿರೋಧ ಪಕ್ಷಗಳು ಯೋಜನೆ ಅನುಷ್ಠಾನ ಕಷ್ಟ ಸಾಧ್ಯವೆಂದು ವದಂತಿ ಹಬ್ಬಿಸಿದ್ದವು. ಆದರೆ ಮುಖ್ಯಮಂತ್ರಿ ಸಿದ್ದರಾಮಯ್ಯ, ಉಪ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಅವರು ವಿರೋಧಿಗಳ ಲೆಕ್ಕಾಚಾರ ಬುಡಮೇಲು ಮಾಡಿದ್ದಾರೆ. ಕೊಟ್ಟ ಮಾತಿನಂತೆ ನಡೆಯುತ್ತಿರುವ ಸರ್ಕಾರ ನಮ್ಮದಾಗಿದೆ ಎಂದರು.

ತಾಲ್ಲೂಕು ಪಂಚಾಯಿತಿ ಕಾರ್ಯ ನಿರ್ವಹಣಾಧಿಕಾರಿ ಮುನಿರಾಜು ಪ್ರಾಸ್ತಾವಿಕವಾಗಿ ಮಾತನಾಡಿದರು. ತಾಲ್ಲೂಕು ಗ್ಯಾರಂಟಿ ಯೋಜನೆ ಅನುಷ್ಠಾನ ಸಮಿತಿ ಅಧ್ಯಕ್ಷ ಶಿವಕುಮಾರ್, ಸದಸ್ಯರಾದ ಪ್ರಸನ್ನ, ಶೃತಿ ಗುಂಡಣ್ಣ, ಧರ್ಮೇಗೌಡ, ಯೋಗೇಶ್, ಹೇಮಂತಗೌಡ, ರೇವಣ್ಣ ಸ್ವಾಮಿ, ಬೈರೇಶ್, ಮಿರ್ಜಾಅಲಿ ಇತರರಿದ್ದರು. ತಾಲ್ಲೂಕು ಪಂಚಾಯಿತಿ ಯೋಜನಾಧಿಕಾರಿ ಪಿ.ಆರ್.ಗೋಪಾಲ್ ಸ್ವಾಗತಿಸಿದರು, ಶಿಶು ಅಭಿವೃದ್ಧಿ ಯೋಜನಾಧಿಕಾರಿ ಸುರೇಶ್ ನಿರೂಪಿಸಿದರು.

# ಜಿಲ್ಲೆಯವರಿಗೆ ಇನ್ನೂ ಸಿಗದ ವಿಮಾನ ಟಿಕೆಟ್

• ಪ್ರಜೋದಯ ವರದಿ

**ಹಾಸನ:** ಉದ್ಯೋಗ ಹಾಗು ಪ್ರಶಸ್ತಿ ಸ್ವೀಕಾರ ಸಮಾರಂಭಕ್ಕಾಗಿ ತೆರಳಿದ್ದ ಜಿಲ್ಲೆಯ ಜನರು ಯುದ್ಧ ಪೀಡಿತ ಪ್ರದೇಶಗಳಲ್ಲಿ ಸಿಲುಕಿದ್ದು ತವರಿಗೆ ಮರಳಲು ಇನ್ನೂ ಸಾಧ್ಯವಾಗಿಲ್ಲ.

ದುಬೈ, ಬಹರೇನ್, ಅಬುದಾಬಿ ಸೇರಿ ವಿವಿಧೆಡೆ ರಾಜ್ಯದ 62 ಹಾಗು ಜಿಲ್ಲೆಯ 19 ಜನರು ಸಿಲುಕಿದ್ದಾರೆ. ಜಿಲ್ಲಾಡಳಿತ ಎಲ್ಲರೊಂದಿಗೆ ಸಂಪರ್ಕದಲ್ಲಿದ್ದು ಅವರನ್ನು ವಾಪಾಸ್ ಕರೆಸಿಕೊಳ್ಳಲು ಸರ್ವ ಪ್ರಯತ್ನ ನಡೆಸಿದೆ.

ಯುದ್ಧದ ಹಿನ್ನಲೆಯಲ್ಲಿ ಆರಂಭ ಎರಡು ದಿನ ವಿಮಾನಯಾನ ಸಂಪೂರ್ಣ ಸ್ಥಗಿತ ಗೊಂಡಿತ್ತು. ಬಳಿಕ ಸೀಮಿತ ವಿಮಾನಗಳ ಹಾರಾಟ ಪ್ರಾರಂಭವಾಗಿದೆ ಯಾದರೂ ಮೊದಲು ಟಿಕೆಟ್ ಬುಕ್ ಮಾಡಿದವರಿಗೆ ಪ್ರಯಾಣದ ಅವಕಾಶ ಕಲ್ಪಿಸಲಾಗುತ್ತಿದೆ. ಜಿಲ್ಲೆಯ ಕೆಲವರು ಮೂರು ಬಾರಿ ಟಿಕೆಟ್ ಬುಕ್ ಮಾಡಿದರೂ ವಿಮಾನ ಸಿಗದೆ ಪರದಾಡುತ್ತಿದ್ದಾರೆ ಎನ್ನಲಾಗಿದೆ.

ವೃದ್ಧರು ಹಾಗು ಮಕ್ಕಳು ಇದ್ದಾರೆ. ಆದಷ್ಟು ಬೇಗ ನಮ್ಮನ್ನು ವಾಪಾಸ್ ಕರೆಸಿಕೊಳ್ಳಿ ಎಂದು ದುಬೈನಲ್ಲಿರುವ ಅರಸೀಕೆರೆಯ ಜಯದೇವ್ ಅವರು ಕೋರಿದ್ದಾರೆ. ಮುಖ್ಯಮಂತ್ರಿ ಸಿದ್ದರಾಮಯ್ಯ, ಉಪ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಹಾಗು ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ.ವಿಜಯೇಂದ್ರ ದೂರವಾಣಿ ಮೂಲಕ ಮಾತನಾಡಿದ್ದಾರೆ. ಆದರೆ ವಾಪಾಸ್ ಬರಲು ಯಾವುದೇ ವ್ಯವಸ್ಥೆ ಆಗಿಲ್ಲವೆಂದು ಅವರು ಅಸಮಾಧಾನ ವ್ಯಕ್ತಪಡಿಸಿದ್ದಾರೆ.

# ಜೀತಕ್ಕಿಟ್ಟುಕೊಂಡಿದ್ದ ಅಪ್ರಾಪ್ತ ಬಾಲಕನ ರಕ್ಷಣೆ



• ಪ್ರಜೋದಯ ವರದಿ

**ಸಕಲೇಶಪುರ:** ಕಾಫಿ ತೋಟದಲ್ಲಿ ಕೂಲಿ ಕೆಲಸಕ್ಕಾಗಿ ಇಟ್ಟುಕೊಂಡಿದ್ದ ಅಪ್ರಾಪ್ತ ಬಾಲಕನನ್ನು ಮಕ್ಕಳ ರಕ್ಷಣಾಧಿಕಾರಿಗಳು ದಾಳಿ ನಡೆಸಿ ರಕ್ಷಣೆ ಮಾಡಿರುವ ಘಟನೆ ತಾಲ್ಲೂಕಿನ ಜಾನೆಕೆರೆ ಗ್ರಾಮದಲ್ಲಿ ನಡೆದಿದೆ.

ಹಾಸನ ತಾಲ್ಲೂಕು ಮೂಲದ 13 ವರ್ಷದ ಬಾಲಕನನ್ನು ಶ್ರೀರಾಮಸೇನೆ ರಾಜ್ಯ ಸಹ ಕಾರ್ಯದರ್ಶಿ ಜಾನೆಕೆರೆ ಹೇಮಂತ್ ಎಂಬುವವರು, ಕಳೆದ 3 ತಿಂಗಳಿಂದ ಬಲವಂತವಾಗಿ ಕೂಡಿ ಹಾಕಿ ಜೀತಕ್ಕೆ ಇಟ್ಟುಕೊಂಡಿದ್ದರು ಎಂಬ ಆರೋಪ ಕೇಳಿ ಬಂದಿದೆ. ಬಾಲಕನ ತಂದೆ ಸಾವನ್ನಪ್ಪಿದ್ದು, ತಾಯಿಗೆ ಅನಾರೋಗ್ಯ ಹಿನ್ನಲೆ ಕೆಲಸ ಹುಡುಕಿಕೊಂಡು ಬಂದಿದ್ದ ಆತನಿಗೆ ವಿದ್ಯಾಭ್ಯಾಸ ಕೊಡಿಸುತ್ತೇನೆಂದು ನಂಬಿಸಿ ಕರೆದೊಯ್ದಿದ್ದ ಹೇಮಂತ್ ಅವರು, ಬಾಲಕನನ್ನು ಹೆದರಿಸಿ ತಮ್ಮ ತೋಟದಲ್ಲಿ ಜೀತಕ್ಕೆ ಇಟ್ಟುಕೊಂಡು, ದನಗಳನ್ನು ಮೇಯಿಸುವುದು, ತೋಟದ ಕೆಲಸಕ್ಕೆ ಬಳಸಿಕೊಳ್ಳುತ್ತಿರುವ ಬಗ್ಗೆ ಅಪರಿಚಿತರು, ಮೈಸೂರಿನ ಒಡನಾಡಿ ಸಂಸ್ಥೆಗೆ ಮಾಹಿತಿ ನೀಡಿದ್ದರು.

ಈ ಬಗ್ಗೆ ಒಡನಾಡಿ ಸಂಸ್ಥೆಯ ಸ್ಟ್ಯಾನ್ಲಿ ಅವರು ಮಕ್ಕಳ ರಕ್ಷಣಾಧಿಕಾರಿಗೆ ಮಾಹಿತಿ ನೀಡಿ ದ್ದರಿಂದ ಬುಧವಾರ ದಾಳಿ ನಡೆಸಿದ ಶಿಶು ಅಭಿವೃದ್ಧಿ ಯೋಜನಾಧಿಕಾರಿ ದಿಲೀಪ್ ಕುಮಾರ್‌ಅವರು, ಜಾನೆಕೆರೆ ಗ್ರಾಮದ ಕಾಫಿ ತೋಟದಲ್ಲಿ ಜೀತಕ್ಕಿದ್ದ ಬಾಲಕನನ್ನು ರಕ್ಷಿಸಿ ಹಾಸನದ ಬಾಲಮಂದಿರಕ್ಕೆ ಬಿಟ್ಟಿದ್ದಾರೆ.

ಬಾಲಕನ ವೈದ್ಯಕೀಯ ಪರೀಕ್ಷೆ ನಡೆಸಿ, ಬಳಿಕ ಆತನಿಂದ ಹೇಳಿಕೆ ಪಡೆದು ಶ್ರೀರಾಮಸೇನೆ ರಾಜ್ಯ ಸಹ ಕಾರ್ಯದರ್ಶಿ ಹೇಮಂತ್ ಜಾನೆಕೆರೆ ವಿರುದ್ಧ ಸಕಲೇಶಪುರ ಗ್ರಾಮಾಂತರ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಿಸುವುದಾಗಿ ಶಿಶು ಅಭಿವೃದ್ಧಿ ಯೋಜನಾಧಿಕಾರಿ ದಿಲೀಪ್ ಅವರು ಪತ್ರಿಕೆಗೆ ತಿಳಿಸಿದ್ದಾರೆ.

# ಪುಲ್ವಾಮಾ ವೀರ ಯೋಧರ ಸ್ಮರಣಾರ್ಥ ಆರೋಗ್ಯ ಶಿಬಿರ



**ಅರೇಹಳ್ಳಿ:** ಬೇಲೂರು ತಾಲ್ಲೂಕು ಬಿಕ್ಕೋಡಿನ ಗಣಪತಿ ಪೆಂಡಾಲ್‌ನಲ್ಲಿ ಲಯನ್ಸ್ ಸೇವಾ ಸಂಸ್ಥೆ ಹಾಗು ಅಡಗೂರು ಯೋಗ ಚೇತನ ಕೇಂದ್ರದಿಂದ ಪುಲ್ವಾಮಾ ದಾಳಿಯಲ್ಲಿ ವೀರ ಮರಣವಪ್ಪಿದ ಯೋಧರ ಸ್ಮರಣಾರ್ಥ ಆರೋಗ್ಯ ಉಚಿತ ತಪಾಸಣೆ, ನೇತ್ರ, ದಂತ ತಪಾಸಣೆ ಮತ್ತು ರಕ್ತದಾನ ಶಿಬಿರ ಏರ್ಪಡಿಸಲಾಗಿತ್ತು.

ಯೋಗ ಗುರು ಚೇತನ್ ಗುರೂಜಿ ಅವರು ಮಾತನಾಡಿ, ಸಮಾಜಕ್ಕೆ ಪೂರಕವಾದ ಚಟುವಟಿಕೆಗಳನ್ನು ಲಯನ್ಸ್ ಸಂಸ್ಥೆ ಪ್ರತಿ ವರ್ಷ ಆಯೋಜಿಸುತ್ತಿದೆ. ಇಂತಹ ಸಮಾಜಮುಖಿ ಚಟುವಟಿಕೆಗಳಲ್ಲಿ ನಾವು ಭಾಗವಹಿಸಿದರೆ ಮಾತ್ರ ಸಂಸ್ಥೆಯ ಧ್ಯೇಯೋದ್ದೇಶಗಳು ಈಡೇರುತ್ತವೆ. ಒಬ್ಬ ವ್ಯಕ್ತಿ ರಕ್ತದಾನ ಮಾಡಿದರೆ ಮೂರು ಜನರ ಜೀವ ಉಳಿಸಿದ ಪುಣ್ಯ ಲಭಿಸುತ್ತದೆ. ಆದ್ದರಿಂದ ರಕ್ತದಾನ ಮಾಡಲು ಆರೋಗ್ಯವಂತರು ಹಿಂಜರಿಯಬಾರದೆಂದರು.

ಲಯನ್ಸ್ ಅಧ್ಯಕ್ಷ ಲತೇಶ್ ಅವರು ಮಾತನಾಡಿ, ಈ ಶಿಬಿರದಲ್ಲಿ 40 ಯೂನಿಟ್ ರಕ್ತವನ್ನು ಸಂಗ್ರಹಿಸಲಾಗಿದೆ. 13 ರೋಗಿಗಗಳು ಅಮ್ಮ ಕಣ್ಣಿನ ಆಸ್ಪತ್ರೆಯಲ್ಲಿ ಕಣ್ಣಿನ ಪೊರೆ ಶಸ್ತ್ರ ಚಿಕಿತ್ಸೆಗೆ ಒಳಗಾಗಿದ್ದು 200ಕ್ಕೂ ಅಧಿಕ ಮಂದಿ ರಕ್ತದೊತ್ತಡ, ಮಧುಮೇಹ ತಪಾಸಣೆ ಮಾಡಿಸಿಕೊಂಡಿ ದ್ದಾರೆಂದರು.

ಲಯನ್ಸ್ ಕಾರ್ಯದರ್ಶಿ ಪ್ರವೀಣ್, ಖಜಾಂಚಿ ದೇವೇಂದ್ರ, ಎನ್.ವೈ.ದಿನೇಶ್, ಪ್ರಾಥಮಿಕ ಆರೋಗ್ಯ ಕೇಂದ್ರದ ವೈದ್ಯ ಡಾ||ಪ್ರವೀಣ್, ರಘು, ಚಂದ್ರಶೇಖರ್, ಶಿವಕುಮಾರ್, ಮೇಘರಾಜ್, ರತನ್ ಕುಮಾರ್ ಇತರರಿದ್ದರು.

# ಮಲಯಾಳ ಏಕೈಕ ಅಧಿಕೃತ ಭಾಷೆ: ಮಸೂದೆಗೆ ರಾಜ್ಯಪಾಲ ಅಂಕಿತ

**ತಿರುವನಂತಪುರ:** ಮಲಯಾಳಕ್ಕೆ ಕೇರಳದ ಏಕೈಕ ಅಧಿಕೃತ ಭಾಷೆ ಸ್ಥಾನಮಾನ ಕಲ್ಪಿಸುವ ಮಸೂದೆಗೆ ಅಲ್ಲಿನ ರಾಜ್ಯಪಾಲ ರಾಜೇಂದ್ರ ವಿ. ಅರ್ಲೇಕರ್ ಬುಧವಾರ ಅಂಕಿತ ಹಾಕಿದ್ದಾರೆ.

ಮಲಯಾಳಂ ಭಾಷಾ ಮಸೂದೆ 2025ಅನ್ನು ಕಳೆದ ವರ್ಷ ಅಕ್ಟೋಬರ್‌ನಲ್ಲಿ ವಿಧಾನಸಭೆ ಅಂಗೀಕರಿಸಿತ್ತು. ಇದಕ್ಕೆ ಈಗ ರಾಜ್ಯಪಾಲರು ಅಂಕಿತ ಹಾಕಿದ್ದಾರೆ ಎಂದು ಲೋಕಭವನ ಮೂಲಗಳು ಹೇಳಿವೆ.

ರಾಜ್ಯದ ಎಲ್ಲಾ ಸರ್ಕಾರಿ ಮತ್ತು ಅನುದಾನಿತ ಶಾಲೆಗಳಲ್ಲಿ, 10ನೇ ತರಗತಿ ವರೆಗೆ ಮಲಯಾಳವನ್ನು ಪ್ರಥಮ ಭಾಷೆಯಾಗಿ ಕಲಿಸುವುದು ಕಡ್ಡಾಯ ಎಂಬ ಅಂಶವನ್ನು ಈ ಮಸೂದೆ ಒಳಗೊಂಡಿದೆ. ಈ ಮಸೂದೆಗೆ ಕರ್ನಾಟಕ ಸರ್ಕಾರದಿಂದ ವಿರೋಧ ವ್ಯಕ್ತವಾಗಿತ್ತು. ಈ ಮಸೂದೆ ಕಾಯ್ದೆಯಾಗಿ ಜಾರಿ ಗೊಂಡ ಬಳಿಕ ಗಡಿಭಾಗದ ಭಾಷಾ ಅಲ್ಪಸಂಖ್ಯಾತ ವಿದ್ಯಾರ್ಥಿಗಳು ಕಡ್ಡಾಯವಾಗಿ ಮಲಯಾಳ ಕಲಿಯ ಬೇಕಾಗುತ್ತದೆಂದು ಕಳಕಳ ವ್ಯಕ್ತಪಡಿಸಿತ್ತು.

# ಭಾರತಕ್ಕೆ ತೈಲ ಪೂರೈಕೆಗೆ ಸಿದ್ಧ : ರಷ್ಯಾ

» ಮೊದಲನೇ ಪುಟದಿಂದ

ನಿಯಂತ್ರಣ ಕೊಠಡಿ ಆರಂಭಿಸಿದೆ. ನಿರಂತರ ಇಂಧನ ಲಭ್ಯತೆ, ಗ್ರಾಹಕರ ಹಿತಾಸಕ್ತಿಗಳ ರಕ್ಷಣೆ ಮತ್ತು ಗಲ್ಫ್ ದೇಶಗಳಲ್ಲಿ ವಾಸಿಸುವ ಹಾಗು ಕೆಲಸ ಮಾಡುವ ಸುಮಾರು ಒಂದು ಕೋಟಿ ಭಾರತೀಯರ ಕ್ಷೇಮ ಭಾರತ ಸರ್ಕಾರದ ಪ್ರಮುಖ ಆದ್ಯತೆ. ಸರ್ಕಾರವು ಅತ್ಯಂತ ಜಾಗರೂಕವಾ ಗಿದ್ದು, ಯಾವುದೇ ಸಂಭಾವ್ಯ ಅಡಚ ಣೆಗೆ ಪ್ರತಿಕ್ರಿಯಿಸಲು ಸಿದ್ಧವಾಗಿದೆ ಎಂದು ಕೇಂದ್ರ ಸಚಿವಾಲಯ ಹೇಳಿದೆ.

**ಯಾರೇ ಉತ್ತರಾಧಿಕಾರಿಯಾದರೂ ಹತ್ಯೆ**

ಅಯತೊಲ್ಲಾ ಅಲಿ ಖಮೇನಿ ಉತ್ತರಾಧಿಕಾರಿಯಾಗಿ ಯಾರೇ ಆಯ್ಕೆಯಾದರೂ ಅವರನ್ನು ಹತ್ಯೆ ಮಾಡುತ್ತೇವೆಂದು ಇಸ್ರೇಲ್ ರಕ್ಷಣಾ ಸಚಿವ ಕಾಟ್ಜ್ ಬುಧವಾರ ಪರೋಕ್ಷ ಬೆದರಿಕೆ ಹಾಕಿದ್ದಾರೆ. ಇಸ್ರೇಲ್ ನಾಶ ಪಡಿಸುವ, ಅಮೇರಿಕಾ ಮತ್ತು ಇತರೆ ದೇಶಗಳಿಗೆ ಬೆದರಿಕೆ ಒಡ್ಡುವ, ತಮ್ಮದೇ ಜನರನ್ನು ಹತ್ತಿಕ್ಕುವ ಕಾರ್ಯವನ್ನು ಮುಂದುವರಿಸುವ ಇರಾನ್ ಭಯೋತ್ಪಾದಕ ಆಡಳಿತವು ಯಾರನ್ನೇ ನಾಯಕನನ್ನಾಗಿ ನೇಮಿಸಿದರೂ ಅವರನ್ನು ಸಂಹಾರ ಮಾಡುತ್ತೇವೆಂದು ಎಚ್ಚರಿಕೆ ನೀಡಿದ್ದಾರೆ.

### ಇರಾನ್‌ನಲ್ಲಿ 1,200 ಜನರ ಸಾವು

ಇಸ್ರೇಲ್-ಅಮೇರಿಕಾ ನಡೆಸಿದ ದಾಳಿಯಲ್ಲಿ ದೇಶದಾದ್ಯಂತ 1,200 ಜನರು ಮೃತಪಟ್ಟಿದ್ದಾರೆಂದು ಇರಾನ್‌ನ ಅಧಿಕೃತ ಐಆರ್‌ಎನ್‌ಎ ಸುದ್ದಿ ಸಂಸ್ಥೆ ತಿಳಿಸಿದೆ. ಇರಾನ್ ಮೇಲಿನ ಸೇನಾ ಕಾರ್ಯಾಚರಣೆ ಯನ್ನು ತೀವ್ರಗೊಳಿಸಿದ್ದು, ಹಲವು ತಾಣಗಳನ್ನು ಗುರಿಯಾಗಿಸಿ ಬುಧವಾರವೂ ಬಾಂಬ್ ಹಾಗು ಕ್ಷಿಪಣಿ ದಾಳಿ ನಡೆಸಿವೆ. ಇರಾನ್ ಕೂಡಾ ಪ್ರತೀ ಕಾರದ ದಾಳಿ ಮುಂದುವರಿಸಿರುವುದರಿಂದ ಪಶ್ಚಿಮ ಏಷ್ಯಾದಲ್ಲಿ ಉದ್ವಿಗ್ನ ಸ್ಥಿತಿ ಮತ್ತಷ್ಟು ವಿಷಮಯಗೊಂಡಿದೆ.

# ಮಾ. 6ಕ್ಕೆ ಬೆಂಗಳೂರಿನಲ್ಲಿ ಗುತ್ತಿಗೆದಾರರ ಪ್ರತಿಭಟನೆ

• ಪ್ರಜೋದಯ ವರದಿ



**ಹಾಸನ:** ಹಿಂದಿನ ಸರ್ಕಾರದ ಅವಧಿಯಲ್ಲಿ ಕೈಗೊಂಡಿರುವ ಕಾಮಗಾರಿಗಳ ಬಾಕಿ ಬಿಲ್ ಪಾವತಿ ಮಾಡದೆ ಸರ್ಕಾರ ವಿಳಂಬ ನೀತಿ ಅನುಸರಿಸುತ್ತಿದ್ದು, ನಮ್ಮ ಹಕ್ಕೊತ್ತಾಯ ಮಂಡಿಸಲು ಮಾ.6ರಂದು ಬೆಂಗಳೂರಿನ ಸ್ವಾತಂತ್ರ್ಯ ಉದ್ಯಾನವನದಲ್ಲಿ ಪ್ರತಿಭಟನೆ ಹಮ್ಮಿಕೊಳ್ಳಲಾಗಿದೆ ಎಂದು ಗುತ್ತಿಗೆದಾರರ ಸಂಘದ ರಾಜ್ಯ ಉಪಾಧ್ಯಕ್ಷ ಕಾರ್ಲೆ ಇಂದ್ರೇಶ್ ಅವರು ಎಚ್ಚರಿಕೆ ನೀಡಿದರು.

ಸುದ್ದಿಗೋಷ್ಠಿಯಲ್ಲಿ ಬುಧವಾರ ಮಾತನಾಡಿ,ರಾಜ್ಯಾದ್ಯಂತ ಸುಮಾರು 25 ಸಾವಿರ ಗುತ್ತಿಗೆ ದಾರರು ಪ್ರತಿಭಟನೆಯಲ್ಲಿ ಭಾಗಿಯಾಗಲಿದ್ದು, ಜಿಲ್ಲೆಯಿಂದ 500 ಮಂದಿ ತೆರಳಲಿದ್ದೇವೆ. ರಾಜ್ಯ ಸರ್ಕಾರ 37 ಸಾವಿರ ಕೋಟಿ ರೂ. ಬಿಲ್ ಬಾಕಿ ಉಳಿಸಿಕೊಂಡಿದೆ. ಜಿಲ್ಲೆಗೆ ಲೋಕೋಪಯೋಗಿ ಇಲಾಖೆಯಿಂದ 293 ಕೋಟಿ ರೂ., ಕಾವೇರಿ ನೀರಾವರಿ ನಿಗಮದಿಂದ 400 ಕೋಟಿ ರೂ., ಸಣ್ಣ ನೀರಾವರಿ ಇಲಾಖೆಯ 131 ಕೋಟಿ ರೂ. ಹಾಗು ಜಲ್ ಜೀವನ್ ಮಿಷನ್(ಜೆಜೆಎಂ) ಯೋಜನೆಗೆ 160 ಕೋಟಿ ರೂ. ಸೇರಿ ಒಟ್ಟು 1,200 ಕೋಟಿ ರೂ. ಬಾಕಿ ಇದೆ ಎಂದರು.

ಕಳೆದ ಮೂರು ವರ್ಷಗಳಿಂದ ಹಣ ಬಿಡುಗಡೆಯಾಗದ ಕಾರಣ ಗುತ್ತಿಗೆದಾರರು ಕೈ ಸಾಲ, ಒಡವೆ ಅಥವಾ ಮನೆ ಅಡಮಾನ ಇಡಬೇಕಾದ ಪರಿಸ್ಥಿತಿ ನಿರ್ಮಾಣವಾಗಿದೆ. ಸರ್ಕಾರದ ನಿರ್ಲಕ್ಷ್ಯ ಧೋರಣೆಯಿಂದ ಗುತ್ತಿಗೆದಾರರು ಅನುಭವಿಸುತ್ತಿರುವ ತೊಂದರೆ ಮಿತಿ ಮೀರಿದೆಯೆಂದರು.

ಜೇಷ್ಠತೆ ಆಧಾರದ ಮೇಲೆ ಬಿಲ್ ಪಾವತಿಸಲಾಗುವುದೆಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಭರವಸೆ ನೀಡಿದ್ದರು. ಅವರು ಭರವಸೆ ನೀಡಿ ಎರಡು ವರ್ಷ ಕಳೆದರೂ ಯಾವ ಪ್ರಗತಿಯಾಗಿಲ್ಲ. ಕೆಲ ಶಾಸಕರಿಗೆ ಹಣ ನೀಡದೆ ಯಾವುದೇ ಕೆಲಸ ಆಗುವುದಿಲ್ಲವೆಂಬ ಪರಿಸ್ಥಿತಿ ನಿರ್ಮಾಣವಾಗಿದೆ ಎಂದು ದೂರಿದರು.

ಮಾ. 31ರೊಳಗೆ ಸರ್ಕಾರ ಬಾಕಿ ಹಣ ಬಿಡುಗಡೆ ಮಾಡದಿದ್ದರೆ ರಾಜ್ಯಾದ್ಯಂತ ಕಾಮಗಾರಿ ಸಂಪೂರ್ಣ ಸ್ಥಗಿತಗೊಳಿಸಿ ಏಪ್ರಿಲ್‌ನಲ್ಲಿ ಮೈಸೂರಿನಿಂದ ಬೆಂಗಳೂರಿನವರೆಗೆ ಪ್ರತಿಭಟನಾ ಪಾದಯಾತ್ರೆ ನಡೆಸಲಾಗುವುದೆಂದು ಎಚ್ಚರಿಕೆ ನೀಡಿದರು.

ಈ ಸಂದರ್ಭದಲ್ಲಿ ಸಂಘದ ಜಿಲ್ಲಾಧ್ಯಕ್ಷ ಜ್ಞಾನೇಶ್, ಪದಾಧಿಕಾರಿಗಳಾದ ತುಳಸಿರಾಮ್, ಮೊಗಣ್ಣಗೌಡ ಹಾಗು ಸಕಲೇಶಪುರದ ಗೋವಿಂದರಾಜು ಇತರರು ಇದ್ದರು.




ಪ್ರಜೋದಯ ದಿನಪತ್ರಿಕೆ, ಸಂಪಾದಕ, ಪ್ರಕಾಶಕ ಮತ್ತು ಮುದ್ರಕರು, ಜೆ.ಆರ್.ಕೆಂಚೇಗೌಡ, ಗಂಧದ ಕೋಠಿ ಹಿಂಭಾಗ, ಕೆ.ಆರ್.ಪುರಂ.ಹಾಸನ. ದೂರವಾಣಿ : 08172-231188, ಮೊ: 9449203019

CMYK CMYK CMYK CMYK